ಸಂಪುಟ : 10 ಸಂಚಿಕೆ: 28 ಪುಟ : 4+2 ಬೆಲೆ: 3.00 ಬುಧವಾರ ಫೆಬ್ರವರಿ 26 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 28 Pages : 4+2 Price : 3.00 Wednesday February 26 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25



ಮಹಾಶಿವರಾತ್ರಿಯ ಶುಭಾಶಯ

ವಿಜಯಸಾಕ್ಷಿ ಪತ್ರಿಕೆಯ ಎಲ್ಲ ಓದುಗರು, ಜಾಹೀರಾತುದಾರರು, ಪತ್ರಿಕಾ ವಿತರಕರಿಗೆ ಹಾಗೂ ಹಿತೈಷಿಗಳಿಗೆ ಮಹಾಶಿವರಾತ್ರಿ ಹಬ್ಬದ ಹಾರ್ದಿಕ ಶುಭಾಶಯಗಳು

– ಸಂಪಾದಕರು

**ಫೆ26ರಿಂದ 28ರವರೆಗೆ ಕರ್ನಾಟಕ ಇಂಟರ್‌ನ್ಯಾಶನಲ್ ಟೂರಿಸಮ್ ಎಕ್ಸ್ಪೋ ಆಯೋಜನೆ | ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಮಾಹಿತಿ**

# ರಾಜ್ಯದ ಪ್ರವಾಸೋದ್ಯಮದ ಬೆಳವಣಿಗೆಗೆ ಒತ್ತಾಸೆ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಿಶ್ವಕ್ಕೆ ರಾಜ್ಯದ ಅದ್ಭುತ ಪ್ರವಾಸಿ ತಾಣಗಳ ಪರಿಚಯ ಮಾಡಿಸುವ ದೃಷ್ಟಿಯಿಂದ ಪ್ರವಾಸೋದ್ಯಮ ಇಲಾಖೆ ಹಾಗೂ ಕರ್ನಾಟಕ ಟೂರಿಸಮ್ ಸೊಸೈಟಿಯ ಸಹಯೋಗದೊಂದಿಗೆ ಫೆಬ್ರವರಿ 26ರಿಂದ 28ರವರೆಗೆ ಬೆಂಗಳೂರಿನಲ್ಲಿ ಕರ್ನಾಟಕ ಇಂಟರನ್ಯಾಶನಲ್ ಟೂರಿಸಮ್ ಎಕ್ಸ್ಪೋ ಆಯೋಜಿಸಲಾಗಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಎಕ್ಸ್ಪೋ ಉದ್ಘಾಟಿಸುವರು ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ್ ಹೇಳಿದರು. ಮಂಗಳವಾರ ಸರ್ಕ್ಯೂಟ್ ಹೌಸ್‌ನಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಫೆಬ್ರವರಿ 27 ಮತ್ತು 28ರಂದು 2 ದಿನಗಳ ಕಾಲ ವ್ಯವಹಾರಿಕ ಸಭೆಗಳು ನಡೆಯಲಿವೆ. ನಮ್ಮ ರಾಜ್ಯದಲ್ಲಿ ಅಸಂಖ್ಯಾತ ಪ್ರವಾಸಿ ತಾಣಗಳು, ಸ್ಮಾರಕಗಳು ಇವೆ. 25 ಸಾವಿರಕ್ಕೂ ಹೆಚ್ಚು ಅರಕ್ಷಿತ ಸ್ಮಾರಕಗಳಿದ್ದು, ಅವುಗಳಲ್ಲಿ 800ಕ್ಕೂ ಹೆಚ್ಚು ಸ್ಮಾರಕಗಳನ್ನು ರಕ್ಷಿತ ಸ್ಮಾರಕಗಳಾಗಿ ಘೋಷಿಸಲಾಗಿದೆ. ಮುಂದಿನ ಪೀಳಿಗೆಗೆ ಇವುಗಳ ಮಹತ್ವವನ್ನು ತಿಳಿಸಲು ಹಾಗೂ ಅವುಗಳ ಸಂರಕ್ಷಣೆಯ ಮಹತ್ವವನ್ನು ತಿಳಿಸುವ ಮಹಾತ್ಕಾರ್ಯಕ್ಕೆ ನಮ್ಮ ಸರ್ಕಾರ ಮುಂದಾಗಿದೆ. ನಮ್ಮ ಕಲೆ, ಸಂಸ್ಕೃತಿ, ಪರಂಪರೆ, ಇತಿಹಾಸ, ಕರಕುಶಲ ಉತ್ಪನ್ನಗಳು, ಪಾಕ ಪದ್ಧತಿ, ನೃತ್ಯ ಪ್ರಕಾರಗಳು, ಜೀವನ ಶೈಲಿ, ಅತಿಥಿ ಸತ್ಕಾರ ಇತ್ಯಾದಿಗಳನ್ನು ಈ ಸಂದರ್ಭದಲ್ಲಿ ಪ್ರದರ್ಶನ ಮಾಡಲಾಗುವುದು ಎಂದರು.



> ಯೋಗಪಟುಗಳಿಂದ ಯೋಗ ಪ್ರದರ್ಶನ ಏರ್ಪಡಿಸಲಾಗಿದ್ದು, ರೋಸ್ ವುಡ್ ಇನ್ ಲೇ ಕಾರ್ವಿಂಗ್, ಸಂಡೂರು ಕಸೂತಿ, ಬಿದ್ರಿ ಮುಂತಾದ ಕಲೆಗಳ ಚಟುವಟಿಕೆಗಳ ಪ್ರದರ್ಶನ ನೀಡಲಾಗುವುದು. ದೇಶಿ ಮತ್ತು ವಿದೇಶಿ ಪ್ರವಾಸಿಗರನ್ನು ನಿಯಮಿತವಾಗಿ ಈ ಸಮಾವೇಶದ ಮೂಲಕ ರಾಜ್ಯಕ್ಕೆ ಸೆಳೆಯುವುದು ಮತ್ತು ಈ ಸಮಾವೇಶದಲ್ಲಿ ಭಾಗವಹಿಸುವ ಟ್ರಾವೆಲ್ ಆಪರೇಟರ್‌ಗಳು ನಮ್ಮ ರಾಜ್ಯದ ಪ್ರಚಾರ ರಾಯಭಾರಿಗಳಾಗಿ ತಮ್ಮ ತಮ್ಮ ದೇಶದ ಪ್ರವಾಸಿಗರನ್ನು ನಮ್ಮ ರಾಜ್ಯಕ್ಕೆ ನಿಯಮಿತವಾಗಿ ಕಳುಹಿಸುವಲ್ಲಿ ಪ್ರಮುಖ ಪಾತ್ರ ವಹಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶಗಳಾಗಿವೆ.
>
> –ಎಚ್.ಕೆ. ಪಾಟೀಲ.
> ಕಾನೂನು, ಪ್ರವಾಸೋದ್ಯಮ ಸಚಿವರು.

ಪ್ರವಾಸೋದ್ಯಮದ ಸಮಗ್ರ ಬೆಳವಣಿಗೆಗೆ ಒತ್ತಾಸೆಯಾಗಿ ನಿಲ್ಲುವುದು ನಮ್ಮ ಸರ್ಕಾರದ ಗುರಿಯಾಗಿದ್ದು, ಅದರ ಪೈಕಿ ಎಕ್ಸ್ಪೋ ಒಂದು ಬಹುಮುಖ್ಯವಾದ ಚಟುವಟಿಕೆಯಾಗಿದೆ. ಕೆಲವೇ ಕೆಲವು ರಾಜ್ಯಗಳು ಈ ಮಾದರಿಯ ಬಿ2ಬಿ ಸಮಾವೇಶಗಳನ್ನು ದೇಶದಲ್ಲಿ ಆಯೋಜನೆ ಮಾಡುತ್ತಿದ್ದು, ಅದರಲ್ಲಿ ನಮ್ಮ ರಾಜ್ಯವೂ ಒಂದಾಗಿದೆ. ನಮ್ಮ ಈ ಕ್ರಮಕ್ಕೆ ಕೇಂದ್ರ ಸರ್ಕಾರವು ಬೆಂಬಲ ನೀಡಿದ್ದು, ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯವು ಈ ಸಮಾವೇಶದಲ್ಲಿ ಭಾಗವಹಿಸುತ್ತಿದೆ. ಪ್ರವಾಸೋದ್ಯಮ ವಲಯದ ಎಲ್ಲಾ ಭಾಗಿದಾರರನ್ನು ಒಂದೇ ಸೂರಿನಡಿ ಕರೆತಂದು ಈ ವಲಯದ ಆಗುಹೋಗುಗಳ ಬಗ್ಗೆ ಚರ್ಚೆ ನಡೆಸಿ ಮಾರ್ಗೋಪಾಯಗಳನ್ನು ಪಡೆಯುವ ಉದ್ದೇಶ ಹೊಂದಲಾಗಿದೆ. ಹೋಟೆಲ್ ಉದ್ಯಮಿಗಳು, ಟ್ರಾವೆಲ್ ಏಜೆನ್ಸಿಗಳು, ಹೋಂಸ್ಟೇ ಮಾಲೀಕರು, ಕೃಷಿ ಪ್ರವಾಸೋದ್ಯಮ ಪ್ರವರ್ತಕರು, ಪ್ರವಾಸಿ ಮಾರ್ಗದರ್ಶಿಗಳು, ಮಹಿಳಾ ಉದ್ಯಮಿಗಳು ಸೇರಿದಂತೆ ಈ ವಲಯಕ್ಕೆ ಸಂಬಂಧಪಟ್ಟವರೆಲ್ಲರೂ ಈ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಮಾರಾಟಗಾರರು ಮತ್ತು ಖರೀದಿದಾರರ ನಡುವೆ ಸಂಪರ್ಕ ಸೇತುವೆಯಾಗಿ ಪ್ರವಾಸೋದ್ಯಮ ಇಲಾಖೆಯು ಎಕ್ಸ್ಪೋ ಮೂಲಕ ಕೆಲಸ ಮಾಡುತ್ತಿದೆ. 3 ದಿನಗಳಲ್ಲಿ ಸರಿ ಸುಮಾರು 16,000 ಬ್ಯುಸಿನೆಸ್ ಮೀಟಿಂಗ್‌ಗಳು ನಡೆಯಲಿವೆ. ಭಾಗವಹಿಸುವ ಪ್ರತಿ ಭಾಗಿದಾರನು ಕಡ್ಡಾಯವಾಗಿ 40 ಮೀಟಿಂಗ್‌ಗಳನ್ನು 2 ದಿನಗಳಲ್ಲಿ ನಮ್ಮ ಭಾಗಿದಾರರೊಂದಿಗೆ ಮಾಡುವಂತೆ ವ್ಯವಸ್ಥೆ ಮಾಡಲಾಗಿದೆ. ಈ 3 ದಿನಗಳಲ್ಲಿ ನಮ್ಮ ರಾಜ್ಯದ ಶ್ರೀಮಂತ ಕಲೆ, ಸಂಸ್ಕೃತಿಯನ್ನು ಬಿಂಬಿಸುವಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು, ನಮ್ಮ ಆಹಾರ ಶೈಲಿಯ ಪರಿಚಯ, ನೆಟ್ವರ್ಕಿಂಗ್ ಮೀಟಿಂಗ್‌ಗಳು, ಫ್ರಿ ಮತ್ತು ಪೋಸ್ಟ್ ಎಫ್‌ಎಮ್ ಟೂರ್‌ಗಳು ನಡೆಯಲಿವೆ.

> ಪಾರದರ್ಶಕ ಸ್ಪರ್ಧಾತ್ಮಕ ಪ್ರಕ್ರಿಯೆ ಮೂಲಕ ದೇಶ–ವಿದೇಶಗಳ ಖರೀದಿದಾರರನ್ನು ಆಯ್ಕೆ ಮಾಡಲಾಗಿದೆ. 36 ದೇಶಗಳ 300 ಜನರ ಸಂದರ್ಶನ ನಡೆಸಿ, ಸುಮಾರು 110ಕ್ಕೂ ಹೆಚ್ಚು ವಿದೇಶಿ ಖರೀದಿದಾರರು, ಏಜೆಂಟ್‌ಗಳು ಮತ್ತು 15ಕ್ಕೂ ಹೆಚ್ಚು ವಿದೇಶಿ ಟ್ರಾವೆಲ್ ಮಾಧ್ಯಮದವರನ್ನು ಆಯ್ಕೆ ಮಾಡಲಾಗಿದೆ. ಅಲ್ಲದೇ 858ಕ್ಕೂ ಹೆಚ್ಚು ದೇಶೀಯ ಖರೀದಿದಾರರ ಸಂದರ್ಶನ ನಡೆಸಿ, ಸುಮಾರು 235ಕ್ಕೂ ಹೆಚ್ಚು ಖರೀದಿದಾರರು ಮತ್ತು 20ಕ್ಕೂ ಹೆಚ್ಚು ದೇಶಿ ಟ್ರಾವೆಲ್ ಮಾಧ್ಯಮದವರನ್ನು ಆಯ್ಕೆ ಮಾಡಲಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಮಾಹಿತಿ ನೀಡಿದರು.

ವಿದೇಶಿ ಏಜೆಂಟ್‌ಗಳಿಗೆ ಕಡ್ಡಾಯವಾಗಿ ಕರ್ನಾಟಕ ಹೆರಿಟೇಜ್ ಡಿಸ್ಕವರಿ, ಕರ್ನಾಟಕದ ಅತ್ಯುತ್ತಮ, ಕರಾವಳಿ ಕರ್ನಾಟಕ, ವನ್ಯಜೀವಿ ಹಾಗೂ ಬೆಟ್ಟಗಳು ಮತ್ತು ರಾಯಲ್ ಮೈಸೂರು ಹೆರಿಟೇಜ್‌ನ 5 ದಿನಗಳ ಪ್ರವಾಸ ಕಾರ್ಯಕ್ರಮ ಏರ್ಪಡಿಸಲಾಗಿದೆ. 30 ಜನರ 5 ತಂಡಗಳನ್ನಾಗಿ ವಿಂಗಡಿಸಿ, ಈ ಪ್ರವಾಸದಲ್ಲಿ ಭಾಗವಹಿಸಿದವರೆಲ್ಲರೂ ನಮ್ಮ ರಾಜ್ಯದ ಸಂಸ್ಕೃತಿಗೆ ಕಲೆಗೆ ಮಾರುಹೋಗಿದ್ದಾರೆ ಎಂದರು.

▶▶3ನೇ ಪುಟಕ್ಕೆ

## ಡಿನೋಟಿಫಿಕೇಷನ್ ಕೇಸ್: ಸಚಿವ ಕುಮಾರಸ್ವಾಮಿ ಅರ್ಜಿ ವಜಾ ಮಾಡಿದ ಸುಪ್ರೀಂ!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಅವರಿಗೆ ಸುಪ್ರೀಂ ಕೋರ್ಟ್ ಬಿಗ್ ಶಾಕ್ ಕೊಟ್ಟಿದೆ. ತಮ್ಮ ವಿರುದ್ಧದ ಡಿ ನೋಟಿಫಿಕೇಶನ್ ಪ್ರಕರಣದ ಮೇಲಿನ ಕ್ರಿಮಿನಲ್ ಮೊಕದ್ದಮೆಗಳನ್ನು ರದ್ದುಗೊಳಿಸುವಂತೆ ಕೋರಿ ಎಚ್.ಡಿ ಕುಮಾರಸ್ವಾಮಿ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ.

ಪ್ರಕರಣದಲ್ಲಿ ಲೋಕಾಯುಕ್ತ ಬಿ ರಿಪೋರ್ಟ್ ಸಲ್ಲಿಸಿದ್ದು, ಇದನ್ನು ಹೈಕೋರ್ಟ್ ರದ್ದುಗೊಳಿಸಿತ್ತು. ಇದನ್ನು ಪ್ರಶ್ನಿಸಿ ಕುಮಾರಸ್ವಾಮಿ ಸುಪ್ರೀಂಕೋರ್ಟ್ ಮೆಟ್ಟಿಲೇರಿದ್ದರು. ಆದ್ರೆ, ಇದೀಗ ಸುಪ್ರೀಂಕೋರ್ಟ್ ಎಚ್ಚಿಕೆ ಅರ್ಜಿಯನ್ನು ವಜಾಗೊಳಿಸಿ ಆದೇಶ ಹೊರಡಿಸಿದೆ.

ಕುಮಾರಸ್ವಾಮಿ ಸಿಎಂ ಆಗಿದ್ದಾಗ ಬನಶಂಕರಿ ಬಳಿಯ ಹಲಗೆವಡೇರಹಳ್ಳಿ ಸರ್ವೆ ನಂ. 128, 137 ರಲ್ಲಿನ 2 ಎಕರೆ 24 ಗುಂಟೆ ಜಮೀನನ್ನು ಕಾನೂನುಬಾಹಿರವಾಗಿ ಡಿ ನೋಟಿಫಿಕೇಷನ್ ಮಾಡಿದ ಆರೋಪ ಕೇಳಿಬಂದಿತ್ತು. ಈ ಕುರಿತ ದಾಖಲೆಗಳ ಸಮೇತ ಮಹದೇವಸ್ವಾಮಿ 2012ರಲ್ಲಿ ಖಾಸಗಿ ದೂರು ಸಲ್ಲಿಸಿದ್ದರು. ಕುಮಾರಸ್ವಾಮಿ ಜೊತೆಗೆ ಪದ್ಮಾ, ಶ್ರೀದೇವಿ, ಚೇತನ್‌ಕುಮಾರ್, ಕೆ.ಬಿ ಶಾಂತಮ್ಮ, ಎಸ್. ರೇಖಾ ಚಂದ್ರು, ಯೋಗ ಮೂರ್ತಿ, ಬಿ.ನರಸಿಂಹಲು ನಾಯ್ಡು, ಆರ್. ಬಾಲಕೃಷ್ಣ, ಟಿ. ಮುರುಳಿಧರ್, ಜಿ. ಮಲ್ಲಿಕಾರ್ಜುನ, ಇ.ಎ ಯೋಗೇಂದ್ರನಾಥ, ಪಿ.ಜಗದೀಶ, ಡಿ.ಎಸ್ ದೀಪಕ್, ಎಂ.ಸುಬ್ರಮಣಿ, ಬಾಲಾಜಿ ಇನ್ಫ್ರಾ, ಶುಭೋಧಯ ಬಿಲ್ಡರ್ಸ್, ಸನ್‌ರೈಸ್ ಬಿಲ್ಡರ್ಸ್ ಮತ್ತು ಆರತಿ ಡೆವಲಪರ್ಸ್ ಪ್ರಮುಖರು ಆರೋಪಿತರಾಗಿದ್ದಾರೆ.

**ಜಿಲ್ಲಾ ಮಟ್ಟದ ಉದ್ಯೋಗ ಮೇಳ–2025ರ ಪೂರ್ವಸಿದ್ಧತಾ ಸಭೆಯಲ್ಲಿ ಡಿಸಿ ಸಿ.ಎನ್. ಶ್ರೀಧರ್**

# ಉದ್ಯೋಗ ಮೇಳವನ್ನು ವ್ಯವಸ್ಥಿತವಾಗಿ ಜರುಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಮಟ್ಟದ ಉದ್ಯೋಗ ಮೇಳವನ್ನು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಮಾರ್ಚ್ 1 ಮತ್ತು 2ರಂದು ಹಮ್ಮಿಕೊಳ್ಳಲಾಗಿದ್ದು, ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟು ನಿರ್ವಹಣೆಗೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಉದ್ಯೋಗ ಮೇಳದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾರ್ಚ್ 1 ಮತ್ತು 2ರಂದು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗುವ ಉದ್ಯೋಗ ಮೇಳದಲ್ಲಿ ಪ್ರತಿಷ್ಠಿತ ಕಂಪನಿಗಳು ನೋಂದಣಿ ಮಾಡಿಕೊಳ್ಳುತ್ತಿವೆ. ಸದರಿ ಕಂಪನಿಗಳಿಂದ 6695 ಹುದ್ದೆಗಳಿಗೆ ಬೇಡಿಕೆಯಿದ್ದು, ಉದ್ಯೋಗ ಆಕಾಂಕ್ಷಿಗಳು ವೆಬ್‌ಸೈಟ್ ಫಫಫ.ಉಂಆಂಉಎಔಃಈಂಖಖ.ಅಔಒ ನಲ್ಲಿ ಅಥವಾ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ನೊಂದಾಯಿಸಿಕೊಳ್ಳಬೇಕು. ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳುವಂತೆ ಕ್ರಮ ವಹಿಸಬೇಕು. ಈ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದರು.

ಯುವನಿಧಿ ಫಲಾನುಭವಿಗಳಾಗಿರುವ 4500 ಅಭ್ಯರ್ಥಿಗಳು ಉದ್ಯೋಗ ಮೇಳದಲ್ಲಿ ನೋಂದಣಿ ಆಗಬೇಕು. ಪಾರ್ಕಿಂಗ್ ಪ್ರದೇಶ ಸೇರಿದಂತೆ ಉದ್ಯೋಗ ಮೇಳ ಜರುಗುವ ಸ್ಥಳದ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಶಿಸ್ತುಬದ್ಧ, ವ್ಯವಸ್ಥಿತ ಆಯೋಜನೆಯಾಗಬೇಕು ಎಂದು ನುಡಿದರು.



ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಸರಿಯಾಗಿ ಸಾರಿಗೆ ವ್ಯವಸ್ಥೆಯನ್ನು ಮಾಡಬೇಕು. ಬೆಟಗೇರಿಯಿಂದ ರೈಲ್ವೇ ನಿಲ್ದಾಣಯಿಂದ ಸಮರ್ಪಕ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವರಾಜ ಕೊಟ್ಟೂರ, ಕೌಶಲ್ಯಾಭಿವೃದ್ಧಿ ಅಧಿಕಾರಿ ಬಸವರಾಜ ಮಲ್ಲೂರ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಅಧಿಕಾರಿ ಶರಣು ಗೋಗೇರಿ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಹಾಜರಿದ್ದರು.

> ಉದ್ಯೋಗ ಮೇಳದ ಯಶಸ್ವಿಗಾಗಿ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಆಯಾ ಸಮಿತಿಯ ಅಧಿಕಾರಿಗಳು ತಮಗೆ ವಹಿಸಿದ ಜವಾಬ್ದಾರಿಯನ್ನು ಅರಿತು ಉದ್ಯೋಗ ಮೇಳವನ್ನು ಯಶಸ್ವಿಗೊಳಿಸಬೇಕು. ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳಿಗಾಗಿ ವಿವಿಧ ಮಳಿಗೆಗಳನ್ನು ತೆರೆಯಲಾಗುತ್ತಿದ್ದು, ಯಾವುದೇ ಗೊಂದಲ ಸೃಷ್ಟಿಯಾಗದಂತೆ ನೋಡಿಕೊಳ್ಳಬೇಕು. ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳುವವರಿಗೆ ಊಟ–ಉಪಹಾರದ ವ್ಯವಸ್ಥೆ, ಶುದ್ಧ ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಲಭ್ಯಗಳು ಹಾಗೂ ತುರ್ತು ಚಿಕಿತ್ಸೆಗಾಗಿ ಆಂಬುಲನ್ಸ್, ಅಗ್ನಿಶಾಮಕ ವ್ಯವಸ್ಥೆ ಇರುವಂತೆ ಸಂಬಂಧಿತ ಇಲಾಖೆಯ ಅಧಿಕಾರಿಗಳು ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

**ದ್ವಿತೀಯ ಪಿ.ಯು.ಸಿ. ವಾರ್ಷಿಕ ಪರೀಕ್ಷೆ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್**

# ಪರೀಕ್ಷೆಗಳನ್ನು ಪಾರದರ್ಶಕವಾಗಿ ಜರುಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಮಾರ್ಚ್ 1ರಿಂದ 20ರವರೆಗೆ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ಜರುಗಲಿದ್ದು, ಪರೀಕ್ಷೆಗಳನ್ನು ಅಚ್ಚುಕಟ್ಟಾಗಿ ಹಾಗೂ ಪಾರದರ್ಶಕವಾಗಿ ಜರುಗಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಗಳ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ 23 ಪರೀಕ್ಷಾ ಕೇಂದ್ರಗಳಲ್ಲಿ ದ್ವಿತೀಯ ಪಿ.ಯು.ಸಿ ಪರೀಕ್ಷೆಗಳು ಜರುಗಲಿದ್ದು, ಪರೀಕ್ಷಾ ಕೇಂದ್ರಗಳಲ್ಲಿ ಗೋಡೆ ಗಡಿಯಾರಗಳು ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲು ಅಗತ್ಯವಿರುವ ಗಾಳಿ, ಬೆಳಕು, ನೀರಿನ ವ್ಯವಸ್ಥೆಗಳನ್ನು ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಆದ್ಯತೆ ಮೇರೆಗೆ ನೀಡಬೇಕು ಎಂದು ಸೂಚಿಸಿದರು.

ಪರೀಕ್ಷಾ ಸಮಯದಲ್ಲಿ ಯಾವುದೇ ಅಕ್ರಮ, ಲೋಪ–ದೋಷಗಳಾಗದಂತೆ ಎಚ್ಚರಿಕೆ ವಹಿಸಬೇಕು. ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ಪರೀಕ್ಷಾ ಕೇಂದ್ರಗಳಿಗೆ ವೀಕ್ಷಕರನ್ನು, ಸ್ಥಳೀಯ ನಿರೀಕ್ಷಣಾಧಿಕಾರಿಯನ್ನು, ಮಾರ್ಗಾಧಿಕಾರಿಗಳನ್ನು ಮತ್ತು ತ್ರಿಸದಸ್ಯ ಸಮಿತಿಯನ್ನು ನೇಮಿಸಲಾಗಿದೆ. ಅಧಿಕಾರಿಗಳು ತಮಗೆ ನಿಗದಿಪಡಿಸಿದ ಕರ್ತವ್ಯಗಳನ್ನು ನಿರ್ವಹಿಸಬೇಕೆಂದು ಸೂಚಿಸಿದರು.



ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ದ್ವಿತೀಯ ಪಿಯುಸಿ ಪರೀಕ್ಷೆಗಳು ಸುವ್ಯವಸ್ಥಿತವಾಗಿ ಜರುಗುವಂತೆ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಸೂಚಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ ಮಾತನಾಡಿ, ಮಾರ್ಚ್ 1ರಿಂದ 20ರವರೆಗೆ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ಜಿಲ್ಲೆಯ 23 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು, 11904 ಪರೀಕ್ಷಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಗಳು ಶಾಂತಿಯುತವಾಗಿ ಹಾಗೂ ಸುಗಮವಾಗಿ ಜರುಗಲು ಕ್ರಮ ವಹಿಸಲಾಗಿದೆ ಎಂದರು.

ಸಭೆಯಲ್ಲಿ ಪರೀಕ್ಷಾ ಕೇಂದ್ರಗಳ ಸ್ವಚ್ಛತೆ, ಸಿ.ಸಿ ಟಿವಿ ಅಳವಡಿಕೆ, ಸೂಕ್ತ ಬಂದೋಬಸ್ತ್ ಕುರಿತು ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಸೇರಿದಂತೆ ಪರೀಕ್ಷಾ ಕೇಂದ್ರದ ಮುಖ್ಯಸ್ಥರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಜಿಲ್ಲೆಯಲ್ಲಿನ ಪರೀಕ್ಷಾ ಕೇಂದ್ರಗಳ ವಿವರ

ನಗರದ ಜಗದ್ಗುರು ತೋಂಟದಾರ್ಯ ಪದವಿ ಪೂರ್ವ ಕಾಲೇಜು, ವಿ.ಡಿ.ಎಸ್ ಬಾಲಕಿಯರ ಪದವಿಪೂರ್ವ ಕಾಲೇಜು, ನಗರಸಭೆ ಪದವಿಪೂರ್ವ ಕಾಲೇಜು, ಎಚ್.ಸಿ.ಇ.ಎಸ್ ಪದವಿಪೂರ್ವ ಕಾಲೇಜು, ಕೆ.ವಿ.ಎಸ್.ಆರ್ ಸಂಯುಕ್ತ ಪದವಿಪೂರ್ವ ಕಾಲೇಜು, ಎ.ಎಸ್.ಎಸ್. ಪದವಿಪೂರ್ವ ಕಾಲೇಜು, ಮೈಲಾರಪ್ಪ ಮೆಣಸಗಿ ಪದವಿಪೂರ್ವ ಕಾಲೇಜು, ಸರಕಾರಿ ಪದವಿಪೂರ್ವ ಕಾಲೇಜು, ಗದಗ–ಬೆಟಗೇರಿಯ ಲೋಯಲಾ ಸಂಯುಕ್ತ ಪದವಿಪೂರ್ವ ಕಾಲೇಜು, ಗಜೇಂದ್ರಗಡ ತಾಲೂಕು ನರೇಗಲ್ ಅನ್ನದಾನೇಶ್ವರ ಪದವಿಪೂರ್ವ ಕಾಲೇಜು, ಗಜೇಂದ್ರಗಡದ ಎಸ್.ಎಂ ಭೂಮರೆಡ್ಡಿ ಪದವಿಪೂರ್ವ ಕಾಲೇಜು, ಗಜೇಂದ್ರಗಡದ ಸರಕಾರಿ ಪದವಿಪೂರ್ವ ಕಾಲೇಜು, ನರಗುಂದದ ಲಯನ್ಸ್ ಪದವಿಪೂರ್ವ ಕಾಲೇಜು, ಮುಂಡರಗಿಯ ಜೆ.ಎ. ಪದವಿ ಪೂರ್ವ ಕಾಲೇಜು, ಮುಂಡರಗಿಯ ಸರ್ಕಾರಿ ಪದವಿಪೂರ್ವ ಕಾಲೇಜು, ಶಿರಹಟ್ಟಿಯ ಎಫ್.ಎಂ. ಡಬಾಲಿ ಪದವಿಪೂರ್ವ ಕಾಲೇಜು, ಶಿರಹಟ್ಟಿಯ ಸರ್ಕಾರಿ ಪದವಿಪೂರ್ವ ಕಾಲೇಜು, ರೋಣದ ಕಿತ್ತೂರು ಚೆನ್ನಮ್ಮ ಪದವಿಪೂರ್ವ, ಲಕ್ಷ್ಮೇಶ್ವರದ ಬಿ.ಸಿ.ಎನ್ ಪದವಿಪೂರ್ವ ಕಾಲೇಜು, ಲಕ್ಷ್ಮೇಶ್ವರದ ಸರ್ಕಾರಿ ಪದವಿಪೂರ್ವ ಕಾಲೇಜು.

### ದ್ವಿತೀಯ ಪಿಯುಸಿ ಪರೀಕ್ಷೆ–1ರ ವೇಳಾಪಟ್ಟಿ

ಮಾರ್ಚ್ 1ರಂದು ಕನ್ನಡ, ಅರೇಬಿಕ್ (ಬೆ–10ರಿಂದ ಮಧ್ಯಾಹ್ನ 1ರವರೆಗೆ), ಮಾರ್ಚ್ 3ರಂದು ಗಣಿತ, ಶಿಕ್ಷಣ ಶಾಸ್ತ್ರ, ತರ್ಕಶಾಸ್ತ್ರ, ವ್ಯವಹಾರ, ಅಧ್ಯಯನ (ಬೆ–10ರಿಂದ ಮ–1 ರವರೆಗೆ), ಮಾರ್ಚ್ 4ರಂದು ತಮಿಳು, ತೆಲುಗು, ಮಲಯಾಳಂ, ಮರಾಠಿ, ಉರ್ದು, ಸಂಸ್ಕೃತ, ಫ್ರೆಂಚ್ (ಬೆ–10ರಿಂದ ಮ–1ರವರೆಗೆ), ಮಾರ್ಚ್ 5ರಂದು ರಾಜ್ಯ ಶಾಸ್ತ್ರ, ಸಂಖ್ಯಾಶಾಸ್ತ್ರ (ಬೆ–10ರಿಂದ ಮ–1ರವರೆಗೆ), ಮಾರ್ಚ್ 7ರಂದು ಇತಿಹಾಸ, ಭೌತಶಾಸ್ತ್ರ (ಬೆ–10ರಿಂದ ಮ–1ರವರೆಗೆ), ಮಾರ್ಚ್ 10ರಂದು ಐಚ್ಛಿಕ ಕನ್ನಡ, ಲೆಕ್ಕಶಾಸ್ತ್ರ, ಭೂಗರ್ಭಶಾಸ್ತ್ರ, ಗೃಹ ವಿಜ್ಞಾನ (ಬೆ–10ರಿಂದ ಮ–1ರವರೆಗೆ), ಮಾರ್ಚ್ 12ರಂದು ಮನಃಶಾಸ್ತ್ರ, ರಸಾಯನಶಾಸ್ತ್ರ, ಮೂಲಗಣಿತ (ಬೆ–10ರಿಂದ ಮ–1 ರವರೆಗೆ), ಮಾರ್ಚ್ 13ರಂದು ಅರ್ಥಶಾಸ್ತ್ರ (ಬೆ–10ರಿಂದ ಮ–1ರವರೆಗೆ), ಮಾರ್ಚ್ 15ರಂದು ಇಂಗ್ಲೀಷ್ (ಬೆ–10ರಿಂದ ಮ–1 ರವರೆಗೆ), ಮಾರ್ಚ್ 17ರಂದು ಭೂಗೋಳಶಾಸ್ತ್ರ (ಬೆ–10ರಿಂದ ಮ–1ರವರೆಗೆ), ಮಾರ್ಚ್ 18ರಂದು ಜೀವಶಾಸ್ತ್ರ, ಸಮಾಜಶಾಸ್ತ್ರ, ವಿದ್ಯುನ್ಮಾನ ಶಾಸ್ತ್ರ, ಗಣಕವಿಜ್ಞಾನ (ಬೆ–10ರಿಂದ ಮ–1ರವರೆಗೆ), ಮಾರ್ಚ್ 19ರಂದು ಹಿಂದೂಸ್ತಾನಿ, ಸಂಗೀತ, ಮಾಹಿತಿ ತಂತ್ರಜ್ಞಾನ, ರಿಟೈಲ್ ಅಟೋಮೊಬೈಲ್, ಹೆಲ್ತ್ ಕೇರ್, ಬ್ಯೂಟಿ ಆಂಡ್ ವೆಲ್‌ನೆಸ್ (ಬೆ–10ರಿಂದ ಮ–12.15ರವರೆಗೆ), ಮಾರ್ಚ್ 20ರಂದು ಹಿಂದಿ (ಬೆ–10ರಿಂದ ಮ–1ರವರೆಗೆ) ಪರೀಕ್ಷೆಗಳು ಜರುಗಲಿವೆ.

# ವಿಶ್ವವಿದ್ಯಾಲಯಗಳನ್ನು ಮುಚ್ಚುವ ತೀರ್ಮಾನ ಕೈಬಿಡಿ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ರಾಜ್ಯದಲ್ಲಿ ಕೊಪ್ಪಳ, ಹಾಸನ, ಹಾವೇರಿ ಮಂಡ್ಯ, ಚಾಮರಾಜನಗರ, ಕೊಡಗು ಮೊದಲಾದ ಜಿಲ್ಲೆಗಳಲ್ಲಿ ಹೊಸದಾಗಿ ಸ್ಥಾಪಿಸಲಾಗಿದ್ದ 9 ವಿಶ್ವವಿದ್ಯಾಲಯಗಳನ್ನು ಮುಚ್ಚಲು ಸರ್ಕಾರ ತೀರ್ಮಾನಿಸಿರುವ ಕ್ರಮವನ್ನು ಭಾರತ ಕಮ್ಯುನಿಸ್ಟ್ ಪಕ್ಷ(ಮಾರ್ಕ್ಸವಾದಿ) ಗಜೇಂದ್ರಗಡ ಸಮಿತಿಯು ತೀವ್ರವಾಗಿ ವಿರೋಧಿಸಿದ್ದು, ವಿಶ್ವವಿದ್ಯಾಲಯಗಳನ್ನು ಮುಚ್ಚುವ ನಿರ್ಧಾರ ಕೈಬಿಡಬೇಕೆಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿದೆ.

ಸಿಪಿಐಎಂ ಪಕ್ಷದ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ ಪತ್ರಿಕಾ ಹೇಳಿಕೆ ನೀಡಿ, ಹಿಂದಿನ ಬಿಜೆಪಿ ಸರ್ಕಾರವು ಈ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಮುನ್ನ ಯಾವುದೇ ಪೂರ್ವ ತಯಾರಿ ನಡೆಸಿರಲಿಲ್ಲ. ಇದರಿಂದ ಸ್ವಂತ ಜಾಗ, ಖಾಯಂ ಬೋಧಕರು ಮತ್ತು ಮೂಲಭೂತ ಸೌಕರ್ಯಗಳಿಲ್ಲದೆ ಅವು ಬಳಲುತ್ತಿದ್ದವು. ರಾಜ್ಯದ ಪ್ರಮುಖ ವಿಶ್ವವಿದ್ಯಾಲಯಗಳಿಂದ ಬೇರ್ಪಡಿಸಿ ಈ ಜಿಲ್ಲಾ ಮಟ್ಟದ ವಿ.ವಿಗಳನ್ನು ಸ್ಥಾಪಿಸಿ ಕಾಲೇಜುಗಳನ್ನು ಸಂಯೋಜಿಸಲಾಗಿತ್ತು. ಇಂತಹ ಕಾಲೇಜುಗಳಲ್ಲಿ ಓದುತ್ತಿರುವ ಸಾವಿರಾರು ವಿದ್ಯಾರ್ಥಿಗಳನ್ನು ಅಲ್ಲಿಗೆ ವರ್ಗಾಯಿಸಲಾಗಿತ್ತು. ಹೀಗೆ ತರಾತುರಿಯಲ್ಲಿ ಈ ವಿಶ್ವವಿದ್ಯಾಲಯಗಳನ್ನು ಆರಂಭಿಸಿದ್ದ ಬಿಜೆಪಿ ಅದಕ್ಕೆಯಾವುದೇ ಹಣಕಾಸಿನ ನೆರವನ್ನು ನೀಡಿರಲಿಲ್ಲ.

ಈ ನಡುವೆ ವಿಶ್ವವಿದ್ಯಾಲಯಗಳಿಗೆ ಸರ್ಕಾರಅನುದಾನವನ್ನೇ ನೀಡದೆ ಸ್ವಂತ ಹಣಕಾಸು ಮೂಲವನ್ನು ಸೃಷ್ಟಿಸಿಕೊಳ್ಳಲು ವಿಶ್ವವಿದ್ಯಾಲಯಗಳ ಮೇಲೆ ಒತ್ತಡ ಹೇರಲಾಯಿತು.

ಇದರಿಂದ ವಿವಿಧ ನೆಪವೊಡ್ಡಿ ವಿದ್ಯಾರ್ಥಿಗಳಿಂದ ಹಣ ಕಕ್ಕಿಸುವ ಕೆಲಸಕ್ಕೆ ವಿಶ್ವವಿದ್ಯಾಲಯಗಳು ಮುಂದಾದವು. ಉನ್ನತ ಶಿಕ್ಷಣವನ್ನು ಖಾಸಗೀಕರಿಸುವ ಭಾಗವಾಗಿಯೇ ಕೇಂದ್ರದ ಒತ್ತಡಕ್ಕೆ ಮಣಿದ ಅಂದಿನ ಬಿಜೆಪಿ ಈ ಕ್ರಮಕೈಗೊಂಡಿತ್ತು.

ಆದರೆ ಇದೀಗ ಅದಕ್ಕೆ ಅಗತ್ಯವಿರುವ ಹಣಕಾಸು ನೆರವು ನೀಡಿ ಅವುಗಳನ್ನು ಬಲಪಡಿಸಬೇಕಾದ ರಾಜ್ಯದಕಾಂಗ್ರೆಸ್ ಸರ್ಕಾರವು ಆರ್ಥಿಕ ನೆಪವನ್ನು ಮುಂದುಮಾಡಿ ಆ ವಿ.ವಿಗಳನ್ನು ಮುಚ್ಚುವ ನಿರ್ಧಾರ-ಕ್ಕೆ ಮುಂದಾಗಿರುವುದು ಸರಿಯಾದ ಕ್ರಮವಲ್ಲ ಎಂದು ದಾವಲಸಾಬ ತಾಳಿಕೋಟಿ ಹೇಳಿದ್ದಾರೆ.

**ನರೇಗಲ್ಲ ಪಿಎಸ್ಐ ಐಶ್ವರ್ಯ ನಾಗರಾಳ ಸೂಚನೆ**

# 'ಥರ್ಡ್ ಐ' ಕಡೆಗೆ ಗಮನವಿರಲಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ದುರ್ಗಾ ವೃತ್ತದಲ್ಲಿ ಅಳವಡಿಸಿರುವ ಥರ್ಡ್ ಐ ಕ್ಯಾಮೆರಾ ಕಡೆಗೆ ವಾಹನ ಸವಾರರ ಗಮನವೇ ಇಲ್ಲದಂತಾಗಿದೆ. ಹೀಗಾಗಿ ನಿತ್ಯವೂ 25-30 ಪ್ರಕರಣಗಳು ದಾಖಲಾಗುತ್ತಿದ್ದು, ತಿಂಗಳಿಗೆ ಏನಿಲ್ಲವೆಂದರೂ ಅಂದಾಜು 1000 ಪ್ರಕರಣಗಳು ದಾಖಲಾಗಿ ವಾಹನ ಸವಾರರು ದಂಡ ಕಟ್ಟುತ್ತಿದ್ದಾರೆ ಎಂದು ನರೇಗಲ್ಲ ಪಿಎಸ್ಐ ಐಶ್ವರ್ಯ ನಾಗರಾಳ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಮಾತನಾಡಿದ ಅವರು, ಹೆಲ್ಮೆಟ್ ಇಲ್ಲದೆ ವಾಹನ ಓಡಿಸುವುದು, ದ್ವಿಚಕ್ರ ವಾಹನದಲ್ಲಿ ಮೂವರು ಸವಾರಿ ಮಾಡುವುದು ಹೀಗೆ ಅನೇಕ ಪ್ರಕರಣಗಳಿಗೆ ಸಂಬಂಧಿಸಿದಂತೆ ದಂಡ ಕಟ್ಟುವುದು ನಡೆದೇ ಇದೆ. ವಾಹನ ಸವಾರರು ಇದರ ಕಡೆಗೆ ಗಮನ ನೀಡದೆ ನಿರ್ಲಕ್ಷ್ಯ ತೋರುತ್ತಿರುವುದು ಸಾರಿಗೆ ನಿಯಮದ ಸ್ಪಷ್ಟ ಉಲ್ಲಂಘನೆಯಾಗಿದ್ದು, ಅದಕ್ಕಾಗಿ ನಿತ್ಯವೂ ನೋಟೀಸ್ ಪಡೆಯುತ್ತಲೇ ಇದ್ದಾರೆ ಎಂದರು.

ಇನ್ನಷ್ಟು ಜನ ಸವಾರರು ನಮಗೇನೂ ನೋಟಿಸ್ ಬಂದಿಲ್ಲ, ಇದು ಏನೂ ಮಾಡುವುದಿಲ್ಲ ಎಂಬಂತೆ ಮಾತನಾಡಿಕೊಳ್ಳುತ್ತಿದ್ದು, ಒಂದಲ್ಲ ಒಂದು ದಿನ ಅಂಥವರಿಗೂ ನೋಟಿಸ್ ಬಂದಾಗಲೇ ಎಚ್ಚರವಾಗುತ್ತದೆ. ಯಾರಿಗೆ ನೋಟಿಸ್ ಬಂದಿದೆಯೋ ಅಂಥವರು ಬೇಗನೆ ಸ್ಟೇಷನ್‌ಗೆ ಬಂದು ನಿಗದಿತ ದಂಡವನ್ನು ಕಟ್ಟಬೇಕು. ನೋಟಿಸ್‌ನಲ್ಲಿರುವ ಮೊಬೈಲ್‌ಗೆ ಕರೆ ಮಾಡಿ ನಾವೂ ಸಹ ಎಚ್ಚರಿಕೆ ನೀಡುತ್ತೇವೆ. ಅದನ್ನೂ ಗಮನಿಸದೆ ಹೋದರೆ ಮೇಲಾಧಿಕಾರಿಗಳ ಆದೇಶದಂತೆ ಚಾರ್ಜ್‌ಶೀಟ್ ಹಾಕಿ ಅಂಥವರನ್ನು ನ್ಯಾಯಾಲಯಕ್ಕೆ ಕಳಿಸುತ್ತೇವೆ. ಕಳೆದ ಒಂದು ತಿಂಗಳಿನಿಂದ ಈ ಕಾರ್ಯ ಚಾಲ್ತಿಯಲ್ಲಿದೆ. ಇದರಿಂದ ವಾಹನ ಸವಾರರು ಸುಮ್ಮನೆ ತೊಂದರೆಯನ್ನು ಅನುಭವಿಸಬೇಕಾಗುತ್ತದೆ. ಅದರ ಬದಲಾಗಿ ಸಾರಿಗೆ ನಿಯಮಗಳನ್ನು ಸರಿಯಾಗಿ ಪಾಲಿಸಿ ವಾಹನ ಚಲಾವಣೆ ಮಾಡಿದರೆ ಅವರಿಗೇ ಕ್ಷೇಮ ಎಂದು ಹೇಳಿದ ಐಶ್ವರ್ಯ ನಾಗರಾಳ, ಇನ್ನು ಮೇಲಾದರೂ ವಾಹನ ಸವಾರರು ಎಚ್ಚರಿಕೆಯಿಂದ ವಾಹನಗಳನ್ನು ಓಡಿಸಬೇಕೆಂದಿದ್ದಾರೆ.

**ಫೆ.26, ಮಹಾ ಶಿವರಾತ್ರಿ ನಿಮಿತ್ತ ವಿಶೇಷ ಲೇಖನ**

# ಶಿವಶಿವ ಎಂದರೆ ಭಯವಿಲ್ಲ...

ನಮ್ಮ ದೇಶದಲ್ಲಿ ಹಲವಾರು ಹಬ್ಬಗಳನ್ನು ಆಚರಿಸುತ್ತಾರೆ. ಪ್ರಮುಖವಾದ ಹಬ್ಬಗಳಲ್ಲಿ ಮಹಾ ಶಿವರಾತ್ರಿ ಒಂದಾಗಿದೆ. ಈ ಹಬ್ಬವನ್ನು ಮಾರ್ಚ್ ತಿಂಗಳ ಮಾಘ ಮಾಸದ ತ್ರಯೋದಶಿಯಂದು ಆಚರಿಸಲಾಗುತ್ತದೆ.

ಶಿವನಿಗೆ ಅತ್ಯಂತ ಪ್ರಿಯವಾದ ದಿನ ಮಹಾ ಶಿವರಾತ್ರಿ. ಈ ಮಹಾಶಿವರಾತ್ರಿಯಂದು ಶಿವನ ನಾಮಸ್ಮರಣೆಯೊಂದಿಗೆ ಜಾಗರಣೆ ಮಾಡುತ್ತಾರೆ. ಉಪವಾಸ ವ್ರತ ಕೈಗೊಳ್ಳುತ್ತಾರೆ. ಶಿವರಾತ್ರಿಯಂದು ಕೈಲಾಸದಲ್ಲಿರುವ ಪರಶಿವನನ್ನು ಜನರು ಭಕ್ತಿಯಿಂದ ಪೂಜಿಸುತ್ತಾರೆ. ಶಂಭೋಶಂಕರನನ್ನು ನೆನೆದು ಜೀವನವನ್ನು ಪಾವನ ಮಾಡಿಕೊಳ್ಳುತ್ತಾರೆ. ಸಾಮಾನ್ಯವಾಗಿ ಹಬ್ಬಗಳನ್ನು ಹಗಲಿನಲ್ಲಿ ಆಚರಿಸಿದರೆ, ಶಿವರಾತ್ರಿಯನ್ನು ರಾತ್ರಿಯಲ್ಲಿ ಆಚರಣೆ ಮಾಡಲಾಗುತ್ತದೆ. ರಾತ್ರಿ ಎಂದರೆ ಕತ್ತಲು, ಕತ್ತಲು ಎಂದರೆ ಅಜ್ಞಾನ, ಅಜ್ಞಾನವನ್ನು ಕಳೆದು ಸುಜ್ಞಾನವನ್ನು ಕರುಣಿಸು ಎಂದು ಶಿವನನ್ನು ಬೇಡುವ ಈ ಶುಭಗಳಿಯೇ ಶಿವರಾತ್ರಿ.

ಶಿವನು ಅಜ್ಞಾನದ ಅಂಧಕಾರದಲ್ಲಿ ಸಂಚರಿಸಿ ಸುಜ್ಞಾನದ ಸುಧೆಯನ್ನು ಹರಡುತ್ತಾನೆ ಎಂಬ ನಂಬಿಕೆ ಇದೆ. ಶಿವನಿಗೆ ಬಿಲ್ವಪತ್ರ ಎಂದರೆ ಪ್ರಿಯ. ಬಿಲ್ವ ಪತ್ರದ ದಳ ಹೃದಯವನ್ನು ಹೋಲುತ್ತದೆ. ಶಿವಲಿಂಗ ಪರಮಾತ್ಮನ ಪ್ರತೀಕವಾಗಿದ್ದು, ಇವೆರಡರ ಸಮ್ಮಿಲನದಿಂದ ಆತ್ಮ-ಪರಮಾತ್ಮನಾಗುತ್ತಾನೆ. ಶಿವರಾತ್ರಿ ದಿನ ಶಿವಲಿಂಗಕ್ಕೆ ಬಿಲ್ವಾರ್ಚನೆ




ಮಾಡುವುದರಿಂದ ಪಾಪಗಳು ಪರಿಹಾರವಾಗುತ್ತವೆ ಎಂಬ ನಂಬಿಕೆ ಇದೆ.

ಶಿವನು ಸರಳ, ಪ್ರಾಮಾಣಿಕತೆ ಮತ್ತು ನಿಷ್ಕಲ್ಮಶಗಳ ಪ್ರತೀಕವಾಗಿದ್ದಾನೆ. ಭಕ್ತಿಯಿಂದ ಧ್ಯಾನ ಮಾಡಿದರೆ ಶಿವನು ಪ್ರಸನ್ನಗೊಳ್ಳುತ್ತಾನೆ ಎಂಬ ನಂಬಿಕೆ ಇದೆ. ಕೈಲಾಸ ವಾಸಿ ಶಿವನಿಗೆ ಅತ್ಯಂತ ಪ್ರೀತಿಯ ದಿನ ತನ್ನನ್ನು ನಿಷ್ಠೆಯಿಂದ ಪೂಜಿಸಿದವರಿಗೆ ಇಷ್ಟಾರ್ಥಗಳನ್ನು ನೀಡುವುದಾಗಿ ಶಿವನು ಪಾರ್ವತಿಯಲ್ಲಿ ಹೇಳಿದ್ದಾನೆ ಎನ್ನುವುದು ಶಿವಪುರಾಣದಲ್ಲಿರುವ ಉಲ್ಲೇಖ.

ಪರ್ವತ ರಾಜನ ಮಗಳಾದ ಪಾರ್ವತಿ ಈ ದಿನದಂದು ರಾತ್ರಿಯಿಡೀ ಶಿವನಾಮವನ್ನು ಭಕ್ತಿಯಿಂದ ಪಠಿಸುತ್ತಾ ಶಿವನನ್ನು ಮೆಚ್ಚಿ ವಿವಾಹವಾದ ದಿನ. ಈ ದಿನವನ್ನು ಶಿವ-ಪಾರ್ವತಿ ಕಲ್ಯಾಣೋತ್ಸವ ದಿನ ಎಂದು ಕರೆಯಲಾಗುತ್ತದೆ. ಶಿವನು ರುದ್ರ ತಾಂಡವವಾಡಿದ ರಾತ್ರಿಯೂ ಇದೇ ಎನ್ನಲಾಗಿದೆ.

ಈ ದೇವತೆಗಳು ಹಾಗೂ ಅಸುರರು ಸಮುದ್ರ ಮಂಥನ ನಡೆದು ಹಾಲಾಹಲ ಉದ್ಭವಿಸಿದಾಗ ಅದನ್ನು ಶಿವನು ಕುಡಿದನು. ವಿಷ ಗಂಟಲೊಳಗೆ ಹೋಗಬಾರದೆಂದು ಪಾರ್ವತಿಯು ಶಿವನ ಗಂಟಲನ್ನು ಬಿಗಿ ಹಿಡಿದು ಇಡೀ ರಾತ್ರಿ ತಡೆದಳು ಎಂಬುದು ಶಿವ ಪುರಾಣದಲ್ಲಿ ಉಲ್ಲೇಖವಿದೆ. ಅಂದಿನಿಂದ ಶಿವನಿಗೆ ನೀಲಂಕಠ ಎಂಬ ನಾಮಧೇಯವಾಯಿತು. ಶಿವನು ಆಭರಣ ಪ್ರಿಯನು ಅಲ್ಲ, ಅಲಂಕಾರ ಪ್ರಿಯನೂ ಅಲ್ಲದೆ, ಭಸ್ಮ ಪ್ರಿಯನಾಗಿದ್ದಾನೆ. ಭಸ್ಮವನ್ನು ಬಳಿದುಕೊಂಡು ಹುಲಿ ಚರ್ಮವನ್ನು ಸುತ್ತಿಕೊಂಡು ಸ್ಮಶಾನದಲ್ಲಿರುವ ಅಮೋಘ ಶಕ್ತಿಯೇ ಶಿವನಾಗಿದ್ದಾನೆ.

ಈ ದಿನ ಹೆಣ್ಣುಮಕ್ಕಳು ಶಿವಗುಣರೂಪಿಯಾಗಿ, ಗುಣಗಳುಳ್ಳ ಪತಿಗಾಗಿ ಪ್ರಾರ್ಥಿಸುತ್ತಾರೆ. ಹಾಗೆ ಮುತ್ತೈದೆಯರು ಪತಿಯ ಶ್ರೇಯೋಭಿವೃದ್ಧಿಗಾಗಿ ಪೂಜಿಸುತ್ತಾರೆ. ಶಿವರಾತ್ರಿಯಂದು ಶಿವನನ್ನು ಪೂಜಿಸಿದರೆ ಇಷ್ಠಾರ್ಥಗಳು ಈಡೇರಿ ಸುಖ, ಶಾಂತಿ, ನೆಮ್ಮದಿ ಉಂಟಾಗುವುದು ಎಂಬ ನಂಬಿಕೆ ಇದೆ. ಅದೆ ರೀತಿ ಹಳ್ಳಿಗಳಲ್ಲಿ ಮಹಿಳೆಯರು ಉತ್ತರಾಣಿ ಕಡ್ಡಿಯಿಂದ ದೀಪವನ್ನು ಬೆಳಗಿ ಶಿವನ ಕೃಪೆಗೆ ಪಾತ್ರರಾಗುತ್ತಾರೆ.

ಪ್ರತಿ ವರ್ಷ ಶಿಶಿರ ಋತುವಿನ ಮಾಘ ಮಾಸದ ಕೃಷ್ಣಪಕ್ಷದ ತ್ರಯೋದಶಿಯಂದು ರಾತ್ರಿ ಸಮಯದಲ್ಲಿ ಶಿವ-ಪಾರ್ವತಿಯರು ಲೋಕ ಸಂಚಾರ ಮಾಡುತ್ತಾ ಶಿವಲಿಂಗಗಳಿಗೆ ಭೇಟಿ ನೀಡಿ ಸಂಕ್ರಮಣಗೊಳಿಸುತ್ತಾರೆ. ಈ ರಾತ್ರಿ ಯಾರು ಶಿವನ ನಾಮ ಜಪ ಮಾಡುತ್ತಾರೋ ಅವರ ಪಾಪ ತೊಳೆದು ಪುಣ್ಯವನ್ನು ಕರುಣಿಸುತ್ತಾನೆ ಎಂಬ ನಂಬಿಕೆ ಇದೆ. ದೇವರ ದೇವ ಮಹಾದೇವನಾದ ಶಿವನನ್ನು ಬ್ರಹ್ಮ, ವಿಷ್ಣು ಎಲ್ಲರೂ ಪೂಜಿಸುತ್ತಾರೆ.

ರಾತ್ರಿಯು ಅಜ್ಞಾನದ ಸಂಕೇತ. ಈ ವೇಳೆ ನಿದ್ದೆ ಮಾಡದೆ ಭಕ್ತಿಯಿಂದ ಪೂಜಿಸಿದರೆ ತಿಳುವಳಿಕೆಯ ಕಡೆ ತಿರುಗಿದಂತೆ. ಜಾಗರಣೆ ಎಂದರೆ ಜಾಗೃತವಾಗಿರುವುದು ಎಂದರ್ಥ. ರಾತ್ರಿ ಎನ್ನುವುದು ತಮೋಗುಣದ ಪ್ರತೀಕವಾಗಿದೆ. ಈ ಸಮಯದಲ್ಲಿ ಎಚ್ಚರವಾಗಿರುವುದರಿಂದ ನಮ್ಮಲ್ಲಿರುವ ಆಲಸ್ಯ, ಅಹಂಕಾರ ಗುಣಗಳು ದೂರವಾಗುತ್ತವೆ.

ಈ ದಿನದಂದು ಕಾಶಿ ವಿಶ್ವನಾಥ, ರಾಮೇಶ್ವರ, ಮಹಾಬಲೇಶ್ವರ, ಗೋಕರ್ಣನಾಥೇಶ್ವರ, ಬನವಾಸಿ ಮಧುಕೇಶ್ವರ, ಮುರಡೇಶ್ವರ ಹೀಗೆ ರಾಜ್ಯ, ದೇಶಾದ್ಯಂತ ಶಿವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಲಾಗುತ್ತದೆ. ಶಿವನಿಗೆ ಹಾಲು, ಮೊಸರು, ತುಪ್ಪ ಹಾಗೂ ಜೇನುತುಪ್ಪದಲ್ಲಿ ಅಭಿಷೇಕ ಮಾಡುವ ಪದ್ಧತಿ ಇದೆ. ಈ ದಿನ ಪ್ರತಿಯೊಬ್ಬರೂ ರಾತ್ರಿಯಿಡಿ ಜಾಗರಣೆ ಮಾಡಿ ನಸುಕಿನ ಜಾವದಲ್ಲಿ ಮಡಿವುಡಿಯಿಂದ ಶಿವ ದೇವಾಲಯಗಳಿಗೆ ಹೋಗಿ ಶಿವನಿಗೆ ಪೂಜೆ ಸಲ್ಲಿಸುತ್ತಾರೆ. ಶಿವನು ತನ್ನ ಭಕ್ತರಿಗೆ ಸಕಲ ಇಷ್ಟಾರ್ಥಗಳನ್ನು ಕರುಣಿಸುತ್ತಾನೆ. ಶಿವನು ಈ ಲೋಕದ ಎಲ್ಲ ಜೀವರಾಶಿಗಳಿಗೆ ಸುಖ, ನೆಮ್ಮದಿ, ಸಮೃದ್ಧಿ, ಸಂಪತ್ತು ಕರುಣಿಸಲಿ, ಮಳೆ-ಬೆಳೆ ಚನ್ನಾಗಿ ಬರಲಿ ಎಂದು ಶಿವನಲ್ಲಿ ಮತ್ತೊಮ್ಮೆ ಪ್ರಾರ್ಥಿಸೋಣ.



**– ಎಸ್.ಕೆ. ಆಡಿನ.**
**ಶಿಕ್ಷಕರು, ಹೊಳೆಆಲೂರ.**

**ಮಹಾಶಿವರಾತ್ರಿಯ ನಿಮಿತ್ತ ವಿಶೇಷ ಲೇಖನ**

# ಜಗತ್ ಸರ್ವಂ ಶಿವಮಯಂ!

ಶಿವಆಗಮ್ಯ,ಅಗೋಚರ,ಅನಂತ, ಅನಾದಿ.ಶಿವನನ್ನುಅರ್ಥಮಾಡಿಕೊಳ್ಳದ ಪಾಮರರಿಗೆ ಆತ ಕೇವಲ ಲಿಂಗರೂಪಿ ಎಂದುತೋರಿದರೆಮತ್ತೆಕೆಲವರಿಗೆಆತ ಅರೆ ನಗ್ನ, ಬೂದಿ ಬಡಿದುಕೊಂಡಿರುವ ಸ್ಮಶಾನವಾಸಿ. ಹುಲಿಯ ಚರ್ಮವನ್ನು ಅಂಗವಸ್ತ್ರವನ್ನಾಗಿ ಧರಿಸಿದ ಶಿವ ನಾಗರಹಾವನ್ನುಕೊರಳಲ್ಲಿಧರಿಸಿದಾತ. ಶಿರದಲ್ಲಿಗಂಗೆಯನ್ನುಹೊಂದಿರುವಆತ ಚಂದ್ರನನ್ನುಕೂಡತನ್ನಶಿರೋಭರಣವನ್ನಾಗಿ ಧರಿಸಿದಾತ. ಇದು ಆತನ ಬಾಹ್ಯ ರೂಪವಾದರೆ ಅಂತರಂಗದಲ್ಲಿ ಆತ ಸಕಲವೂಹೌದು.ಹಲವಾರುವೈರುಧ್ಯಗಳ ಸಂಗಮವಾಗಿರುವ ಶಿವನನ್ನು ಅರ್ಥ ಮಾಡಿಕೊಳ್ಳಲುಬಹಳಷ್ಟುಬುದ್ಧಿಖರ್ಚು ಮಾಡಬೇಕಾಗಿಲ್ಲ.ಶಿವಆದಿಯೋಗಿ,ಭಕ್ತ ಪರಿಪಾಲಕ,ಅಭಿಷೇಕಪ್ರಿಯ,ಪಾರ್ವತಿ ಪತಿ ಹರ ಮಹಾದೇವ.

ನಮ್ಮ ಜನಪದರ ಪಾಲಿಗಂತು ಪಾರ್ವತಿದೇವಿಮನೆಮಗಳಾದರೆಶಿವ ಮನೆಯಳಿಯ.ಅವರಪ್ರೀತ್ಯಾದರಮತ್ತು ಭಕ್ತಿಯ ಭಗವಂತ ಈ ಮುಕ್ಕಣ್ಣ. ದೇವ ದಾನವರು ಕ್ಷೀರಸಾಗರ ಮಂಥನವನ್ನು ಮಾಡಿದಾಗ ಉದ್ಭವವಾದ ವಿಷವನ್ನು ಶಿವಕುಡಿದನು.ಕೊರಳಲ್ಲಿಹಾಲಾಹಲವೇ ತುಂಬಿದ್ದರೂಅದನ್ನುನುಂಗದೆಪತ್ನಿಯ ಅಭೀಪ್ಸೆಯಂತೆ ಜಗತ್ಕಲ್ಯಾಣಕ್ಕಾಗಿ ತನ್ನ ಗಂಟಲಲ್ಲಿಯೇ ಇರಿಸಿಕೊಂಡ ಶಿವ ನೀಲಕಂಠನೆನಿಸಿದ. ಆ ಮೂಲಕ ಬದುಕಿನಲ್ಲಿ ಬರುವ ಎಲ್ಲಾ ಕಷ್ಟ,ದುಃಖ, ನೋವುಗಳನ್ನು ಸಹಿಸಿ ಬಾಳಬೇಕು ಎಂಬ ಸಂದೇಶವನ್ನುನೀಡಿದ.ಲೋಕದ ದುಃಖವನ್ನೆಲ್ಲನನಗಿರಲಿ ಎಂದು ಸರ್ವ ಜನರ ಹಿತವನ್ನು ಕಾಯ್ದವ ಶಿವ....



ನೀಲಕಂಠ,ವಿಷಕಂಠ,ಶ್ರೀಕಂಠಅವನೇ ನಮ್ಮ ನಂಜುಂಡೇಶ್ವರ.

ತನ್ನಕೊರಳಲ್ಲಿಹಾವನ್ನುಸುತ್ತಿಕೊಂಡಿರುವ ಶಿವನ ಕೊರಳಲ್ಲಿರುವ ಹಾವು ನಮ್ಮೆಲ್ಲ ಮನೋದೈಹಿಕ ವಾಂಛೆಗಳ ಪ್ರತೀಕ. ಕೊಂಚ ಏಮಾರಿದರೂ ನಮ್ಮನ್ನು ತನ್ನ ಹಿಡಿತದಲ್ಲಿ ಇನ್ನಿಲ್ಲದಂತೆ ಬಂಧಿಸುವ ಕಾರಣ ಸದಾ ಜಾಗೃತನಾಗಿರಬೇಕು ಎಂಬ ಪಾಠವನ್ನು ನಮಗೆ ಸದಾ ನೀಡುತ್ತಿರುವಾತ ನಾಗೇಶ. ಹಾವು ದ್ವೇಷ,ವೈಷಮ್ಯಗಳ ಸಂಕೇತವಾದರೂ ನಮ್ಮಲ್ಲಿ ಅಮೃತತ್ವ ಇರಬೇಕು ಎಂದು ಸಾರುವಾತ ಶಿವಶಂಕರ.

ಗಂಗೆಯನ್ನು ತನ್ನ ಜಟೆಯಲ್ಲಿ ಧರಿಸಿದಾತ. ಬದುಕಿನಲ್ಲಿ ಅದೆಷ್ಟೇ ಒತ್ತಡಗಳು ನಮ್ಮನ್ನು ಬಾಧಿಸಿದರೂ ತಲೆಯನ್ನು ತಣ್ಣಗೆ ಇಟ್ಟುಕೊಳ್ಳಬೇಕು ಎಂದು ಬೋಧಿಸಿದಾತ. ಗೌರಿಯನ್ನು ತೊಡೆಯ ಮೇಲೆ ಹೊತ್ತು ಇಡೀ ಕುಟುಂಬದ ಭಾರವನ್ನು, ಸ್ತ್ರೀ ಕುಲದ ರಕ್ಷಣೆಗೆ ಕಟಿಬದ್ಧನಾದವನು.

ತನ್ನ ದೇಹದ ಅರ್ಧ ಭಾಗವನ್ನೇ ಪತ್ನಿಗೌರಿಗೆನೀಡಿಅರ್ಧನಾರೀಶ್ವರನಾದ ಶಿವ... ಶಕ್ತಿ ಇಲ್ಲದೆ ಶಿವನಿಲ್ಲ, ಶಿವನಿಲ್ಲದೆ ಶಕ್ತಿ ಇಲ್ಲ ಎಂದು ಸ್ತ್ರೀ-ಪುರುಷ ಸಮಾನತೆಯನ್ನು ಸಾರಿದಾತ. ಅರ್ಧನಾರೀಶ್ವರ ತತ್ವದ ಮೂಲಕ ಈ ಜಗತ್ತಿನಏಳಿಗೆಗೆ,ಮನುಕುಲದಉದ್ಧಾರಕ್ಕೆ ಪುರುಷನಷ್ಟೇ ಹೆಣ್ಣು ಕೂಡ ಕಾರಣಳು ಎಂದು ಸಾರಿದಾತ. ಗಂಗೆ ಎಂದರೆ ನೀರು. ನೀರು ಶುದ್ಧತೆಯ ಸಂಕೇತ. ನೀರಿಲ್ಲದೆ ಈ ಜಗತ್ತಿನ ಬದುಕಿಲ್ಲ ಆದ್ದರಿಂದ ನೀರಿನ ಪ್ರತಿರೂಪವಾದ ಗಂಗೆಯನ್ನು ತಲೆಯ ಮೇಲೆ ಹೊತ್ತು ಪೂಜಿಸಲು ಹೇಳಿದಾತ.

ಕೃಷಿಪ್ರಧಾನವಾದನಮ್ಮಸಂಸ್ಕೃತಿಯಲ್ಲಿ ಎತ್ತುಗಳುನಮ್ಮಜೀವನದಬಹುಮುಖ್ಯ ಸಂಗಾತಿಗಳು. ಸಾಂಘಿಕ ಜೀವನದ ಪರಿಕಲ್ಪನೆಯನ್ನುಮೂಡಿಸುವಎತ್ತುಗಳು ಕೊರಳೆರಡಾದರೂ ಹೊರುವ ನೊಗ ಒಂದೇಎಂಬಂತೆಬದುಕುಸಾಗಿಸುತ್ತವೆ. ಆದ್ದರಿಂದ ವೃಷಭ ವಾಹನ ಶಿವ ಈ ಜಗತ್ತು ಎಂಬ ಸಂಸಾರದ ಭಾರವನ್ನು ಪತ್ನಿ ಸಮೇತನಾಗಿ ತಾನು ಹೊತ್ತಿದ್ದು ಎತ್ತಿನಂತೆ ಪ್ರತಿಯೊಬ್ಬ ವ್ಯಕ್ತಿಯು ಕೂಡ ಕೌಟುಂಬಿಕ,ಸಾಮಾಜಿಕಮತ್ತುಧಾರ್ಮಿಕ ಜವಾಬ್ದಾರಿಗಳನ್ನು ಹೊರಬೇಕೆಂಬ ಸಂದೇಶವನ್ನು ನೀಡುತ್ತಾನೆ.

ಮಹಿಷಾಸುರನಪುತ್ರನಾದಗಜಾಸುರನನ್ನು ಸಂಹರಿಸುವಮುನ್ನಪ್ರಾಯಶ್ಚಿತಕ್ಕೊಳಗಾದ ಗಜಾಸುರನಬೇಡಿಕೆಯಂತೆಆತನಚರ್ಮವನ್ನು ಧರಿಸಿದಎಂಬಶಿವಪುರಾಣದಹೇಳಿಕೆಯು ಶಿವನು ನಾವು ನಮ್ಮ ತಪ್ಪುಗಳನ್ನು ಅರಿತು ಕ್ಷಮೆಯಾಚಿಸಿದಾಗಭಕ್ತವತ್ಸಲನಾದಶಿವ ನಮ್ಮನ್ನುಕ್ಷಮಿಸಿನಮ್ಮನ್ನುಪೊರೆಯುತ್ತಾನೆ ಎಂಬ ಸಂದೇಶವನ್ನು ನೀಡುತ್ತಾನೆ.

ತ್ರಿಮೂರ್ತಿಗಳಲ್ಲಿ ಒಬ್ಬನಾಗಿರುವ ಶಿವ ಲಯಕರ್ತ. ಸೃಷ್ಟಿ, ಸ್ಥಿತಿಗಳಷ್ಟೇ ಮುಖ್ಯವಾದ ಕಾರ್ಯ ಲಯ. ನಮ್ಮಲ್ಲಿರುವ ತಾಮಸ ಗುಣಗಳನ್ನು ಸುಟ್ಟು ಹಾಕಬೇಕು ಸಾತ್ವಿಕ ತೇಜಸ್ಸನ್ನು ಹೆಚ್ಚಿಸಿಕೊಳ್ಳಬೇಕು.ಭೋಗ-ಲಾಲಸೆಗಳ ಬದುಕಿಂದದೂರವಿದ್ದುಸದಾಸಂತೃಪ್ತಿಯ ನೆಮ್ಮದಿಯ ಬದುಕನ್ನು ಜೀವಿಸಬೇಕು.

ಶಿವನಕೈಯಲ್ಲಿರುವಡಮರುಗವುಲಯ ಬದ್ಧವಾದನಾದವನ್ನುಹೊರಡಿಸುವಂತೆ ವ್ಯಕ್ತಿಯುತನ್ನಸಂಸಾರದಲ್ಲಿಲಯಬದ್ಧವಾಗಿ ಬದುಕಬೇಕು, ಬಾಳಬೇಕು. ಶಿವ ಆದಿ ಯೋಗಿ,ಧ್ಯಾನಸಮಾಧಿಯಲ್ಲಿಮುಳುಗಿ ಜಗದಜಂಜಡಗಳನ್ನುಕಳೆದುಕೊಳ್ಳಬಹುದು ಎಂಬ ಸತ್ಯವನ್ನು ಜಗತ್ತಿಗೆ ಅರುಹಿದಾತ ಶಿವ. ಸತ್ಯಪ್ರಿಯ ನಾದ ಶಿವ ಭಕ್ತ ಪ್ರಿಯನು ಹೌದು ಭಕ್ತಿ ಪ್ರಿಯನು ಕೂಡ.

ಇಂತಹ ಶಿವನನ್ನು ಪೂಜಿಸಲು ಶಿವರಾತ್ರಿಯೇಅತ್ಯಂತಶ್ರೇಷ್ಠವಾದದ್ದು ಎಂಬಪರಿಕಲ್ಪನೆನಮ್ಮಪೂರ್ವಜರಲ್ಲಿದ್ದು, ಮನದ ಅಂಧಕಾರವನ್ನು ಕಳೆಯುವ ತ್ರಯೋದಶಿ ಮತ್ತು ಚತುರ್ದಶಿಗಳ ನಡುವಿನಈರಾತ್ರಿಮನದತಮವನ್ನು ಹರಿದು ಸುಜ್ಞಾನದ ಬೆಳಕನ್ನು ಕೊಡು ಎಂದುಶಿವನನ್ನುಪೂಜಿಸುವಪವಿತ್ರವಾದ, ಎಚ್ಚರ ಸ್ಥಿತಿಯಲ್ಲಿರುವಂತಹ ಈ ರಾತ್ರಿಯಂದು ಶಿವನ ಧ್ಯಾನದಲ್ಲಿ, ಪೂಜೆ,ಜಪತಪಗಳಲ್ಲಿ,ಜಾಗರಣೆಯಲ್ಲಿ ಕಳೆದು ಶಿವನ ಆರಾಧನೆಯಲ್ಲಿ ತೊಡಗುವರು.


ಆದ್ದರಿಂದಲೇ ನಮ್ಮ ಶಿವಶರಣರು ಶಿವನು ಕೇವಲ ನಾದ ಮತ್ತು ವೇದಗಳ ಪ್ರಿಯನಲ್ಲ, ಆತ ಭಕ್ತ ಪ್ರಿಯ ಎಂದು ಹಾಡಿ ಹೊಗಳಿದ್ದಾರೆ. ಎಲ್ಲರಿಗೂ ಮಹಾಶಿವರಾತ್ರಿಯ ಶುಭಾಶಯಗಳು.

**– ವೀಣಾ ಹೇಮಂತಗೌಡ ಪಾಟೀಲ, ಮುಂಡರಗಿ.**

# ಪುಲಿಗೆರೆ ಉತ್ಸವದಲ್ಲಿ ಸಂಗೀತ ಸುಧೆ


■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸೋಮೇಶ್ವರ ದೇವಸ್ಥಾನದಲ್ಲಿ ನಡೆದಿರುವ ಪುಲಿಗೆರೆ ಉತ್ಸವದ 3ನೇ ದಿನದ ಸಂಜೆ ಕಾರ್ಯಕ್ರಮದಲ್ಲಿ ಬೆಂಗಳೂರಿನ ಯುವ ಕಲಾವಿದ ನಯನ



ಯಾವಗಲ್ ಮಾರೋ ಬಿಹಾಗ ರಾಗದಲ್ಲಿ ಹಿಂದೂಸ್ತಾನಿ ಗಾಯನ ಪ್ರಾರಂಭಿಸಿ ಸಂಗೀತ ಪ್ರೇಮಿಗಳ ತಲೆದೂಗಿಸಿದರು. ಬಿಲಾಸ್ಖಾನ್ ತೋಡಿ ರಾಗದಲ್ಲಿ ಬಸವಣ್ಣನವರ ವಚನಗಳನ್ನು ತಮ್ಮ ಕಂಚಿನ ಕಂಠದ ಮೂಲಕ ಪ್ರಸ್ತುತಪಡಿಸಿ ಗಮನ ಸೆಳೆದರು. ಕಿರಣ್ ಯಾವಗಲ್ ತಬಲಾ ಹಾಗೂ ಬಸವರಾಜ ಹಿರೇಮಠ ಹಾರ್ಮೋನಿಯಂ ಸಾಥ್ ನೀಡಿದರು.

ಬೆಂಗಳೂರಿನ ಭರತನಾಟ್ಯ ಕಲಾವಿದೆ ಗೌರಿ ಸಾಗರ್ ತಂಡದಿಂದ ರಾಗ ದರ್ಬಾರಿ ಕಾನಡಾದಲ್ಲಿ ಶಿವ ಭಕ್ತಿಗೀತೆ, ರಾಮಾಯಣದ



ತಾರಾ ಬಹುಮುಖ ಪ್ರತಿಭೆಯ ಕಲಾವಿದೆ ಮತ್ತು ವಾನರ ರಾಜರ ಪ್ರಸಂಗ ಪ್ರಸ್ತುತಿ, ಪ್ರಗ್ ಪೂರ್ವಿ ಕಲ್ಯಾಣಿಯಲ್ಲಿ ಶಿವನೃತ್ಯ ಮತ್ತು ಪಾರ್ವತಿ ದೇವಿಯ ಮಧುರ ಗಾನ ಪ್ರಸ್ತುತಿ, ರಾಗ ವಲಜಿಯಲ್ಲಿ ನೃತ್ಯ ಪ್ರದರ್ಶನಕ್ಕೆ ಸೇರಿದ ಅಪಾರ ಜನತೆಯಿಂದ ಚಪ್ಪಾಳೆಯ ಪ್ರೋತ್ಸಾಹ ಸಿಕ್ಕಿತು. ತಂಡದಲ್ಲಿ ಪೃಥ್ವಿ ಪಾರ್ಥಸಾರಥಿ, ಐಶ್ವರ್ಯ ಚೋಳ ರಾಜಪ್ಪ, ನಿತ್ಯಶ್ರೀ ಎಂ ಜೊತೆಯಲ್ಲಿದ್ದರು.

ನಂತರ ಸಂಧ್ಯಾರಾಗದಲ್ಲಿ ಬೆಂಗಳೂರಿನ ಮೌನ ರಾಮಚಂದ್ರ ಅವರಿಂದ ಹಿಂದೂಸ್ತಾನಿ ಗಾಯನ ನಡೆಯಿತು. ರಾಗಶ್ರೀ ವಿಳಂಬಿತ ಜಪತಾಳ ದೊಂದಿಗೆ ಪ್ರಾರಂಭ ದೃತ್ ತಿನತಾಳ ಅಚಾ ಚವತಾಳ, ತದನಂತರ ಮನುಸು ಕರಗದೆ ಸ್ವಾಮಿ, ಬೋಲೋವ ವಿಠ್ಠಲ ಕರಾವ್ ವಿಠ್ಠಲ್ ಮರಾಠಿ ಭಜನ ಅಬಂಗ ಎಲ್ಲರ ಗಮನ ಸೆಳೆಯುವಂತಿದ್ದವು.

ಇವರಿಗೆ ಯುವ ತಬಲಾಪಟು ರಾಘವೇಂದ್ರ ನಾಕೋಡ್ ತಬಲಾ ಹಾಗೂ ಚಿದಂಬರ ಜೋಶಿ ಹಾರ್ಮೋನಿಯಂ ಸಾಥ್ ನೀಡಿದರು.




# ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಉತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಉತ್ಸವ ನಿಮಿತ್ತ ಫೆ.26 ಹಾಗೂ ಫೆ.27ರಂದು ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ಫೆ.26ರ ಮುಂಜಾನೆಯಿಂದ ಜಲಾಭಿಷೇಕ ನಡೆಯಲಿದ್ದು, ರಾತ್ರಿ 9-30ಕ್ಕೆ ಯಾಮಪೂಜಾ, ಲಘು ರುದ್ರಾಭಿಷೇಕ, ಪಂಚಾಮೃತ ಅಭಿಷೇಕ, ರುದ್ರಾಭಿಷೇಕ, ಕ್ಷೀರಾಭಿಷೇಕ, ಮಹಾ ಮಂಗಳಾರತಿ ಜರುಗಲಿದೆ. ಫೆ.27ರ ಸಂಜೆ 5-30ರಿಂದ ಶಿವರಾತ್ರಿ ಅಂಗವಾಗಿ ಬಾನ್ಸುರಿ ವಾದನ, ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ, ಭರತನಾಟ್ಯ, ವೀರಗಾಸೆ ಸೇರಿದಂತೆ ಅನೇಕ



ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಸೋಮೇಶ್ವರ ದೇವಸ್ಥಾನದ ಅರ್ಚಕರ ವತಿಯಿಂದ ವಿವಿಧ ಸೇವಾಕರ್ತರಿಗೆ ಸನ್ಮಾನ ನಡೆಯಲಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ತಹಸಿಲ್ದಾರ ವಾಸುದೇವ ವಿ.ಸ್ವಾಮಿ ನೆರವೇರಿಸಲಿದ್ದಾರೆ. ಅರ್ಚಕರ ಸಂಘದ ಅಧ್ಯಕ್ಷ, ವಕೀಲ ವಿ.ಎಲ್. ಪೂಜಾರ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಅತಿಥಿಗಳಾಗಿ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ಕುಬೇರಪ್ಪ ಮಹಾಂತಶೆಟ್ಟರ, ವಸಂತ ಪಾಟೀಲ ಕುಲಕರ್ಣಿ, ಯುವ ಮುಖಂಡರುಗಳಾದ ಆನಂದಸ್ವಾಮಿ ಗಡ್ಡದೇವರಮಠ, ಸುನೀಲ ಮಹಾಂತಶೆಟ್ಟರ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಹಾಗೂ ಜನಪ್ರತಿನಿಧಿಗಳು, ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ ಎಂದು ಕಾರ್ಯಕ್ರಮ ಸಂಘಟಕರು ಪತ್ರಿಕಾ ಪ್ರಕಟಣೆ ತಿಳಿಸಿದ್ದಾರೆ.

# ಮಾ. 1, 2ರಂದು ಜಿಲ್ಲಾ ಮಟ್ಟದ ಉದ್ಯೋಗ ಮೇಳ

■ವಿಜಯಸಾಕ್ಷಿ ಸುದ್ದಿ, ಗದಗ

ಮಾರ್ಚ್ 1 ಮತ್ತು 2 ರಂದು ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಉದ್ಯೋಗ ಮೇಳವು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಜರುಗಲಿದ್ದು, ಈ ಮೇಳದಲ್ಲಿ ಪ್ರತಿಷ್ಠಿತ ಕಂಪನಿಗಳು ನೋಂದಣಿ ಮಾಡಿಕೊಳ್ಳುತ್ತಿವೆ. ಉದ್ಯೋಗ ಆಕಾಂಕ್ಷಿಗಳು ವೆಬ್‌ಸೈಟ್ WWW.GADAGJOBFAIR.COM ನಲ್ಲಿ ಅಥವಾ ಕ್ಯೂಆರ್‌ಕೋಡ್ ಸ್ಕ್ಯಾನ್ ಮಾಡುವ ಮೂಲಕ ನೊಂದಾಯಿಸಿಕೊಳ್ಳಬೇಕು. ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಮೇಳದಲ್ಲಿ ಪಾಲ್ಗೊಂಡು ಇದರ ಸದುಪಯೋಗಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ರೂ. ನಂ. 106, ಮತ್ತು ಉದ್ಯೋಗಾಧಿಕಾರಿಗಳವರ ಕಚೇರಿ, ರೂ. ನಂ.215 , ಜಿಲ್ಲಾ ಆಡಳಿತ ಭವನ, ಗದಗ. ಮೊ.ಸಂ. 9480151562, 9380985123, 6363330688, 903680429, 9008234012 ಇವರನ್ನು ಸಂಪರ್ಕಿಸಬಹುದಾಗಿದೆ.

## ಸ್ಲಂ ನಿವಾಸಿಗಳ ವಿವಿಧ ಹಕ್ಕೊತ್ತಾಯಗಳಿಗೆ ಆಗ್ರಹಿಸಿ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ । ಪ್ರಸಾದ್ ಅಬ್ಬಯ್ಯ ಭರವಸೆ

# ಸ್ಲಂ ಜನರ ಹಕ್ಕೊತ್ತಾಯಗಳಿಗೆ ಸ್ಪಂದಿಸುತ್ತೇವೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು/ಗದಗ

ಸ್ಲಂ ಜನಾಂದೋಲನ ಕರ್ನಾಟಕ ಮತ್ತು ಸಾವಿತ್ರಿಬಾಯಿ ಫುಲೆ ಮಹಿಳಾ ಸಂಘಟನೆಯಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸ್ಲಂ ಜನರ ಮೇಲಿನ ಸಾಮಾಜಿಕ ಮತ್ತು ಅಭಿವೃದ್ಧಿ ತಾರತಮ್ಯ ವಿರೋಧಿಸಿ ಹಾಗೂ ಖಾಸಗಿ ಮಾಲೀಕತ್ವದ ಕೊಳಚೆ ಪ್ರದೇಶಗಳ ಘೋಷಣೆಗೆ ತೊಡಕಾಗಿರುವ ಸಂವಿಧಾನ ವಿರೋಧಿ ವಸತಿ ಇಲಾಖೆ ಸುತ್ತೋಲೆಯನ್ನು ತಕ್ಷಣ ಹಿಂಪಡೆಯಲು ಆಗ್ರಹಿಸಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಯಿತು. 2025–26ನೇ ಸಾಲಿನ ಬಜೆಟ್‌ನಲ್ಲಿ ಸ್ಲಂ ಜನರ ಜನಸಂಖ್ಯೆಗೆ ಅನುಗುಣವಾಗಿ ಬಜೆಟ್‌ನಲ್ಲಿ ಪಾಲು ನೀಡಬೇಕು, 2023ರ ವಿಧಾನ ಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ನೀಡಿರುವ ಪ್ರಣಾಳಿಕೆಯ ಭರವಸೆಗಳನ್ನು ಈಡೇರಿಸಬೇಕು. ಸ್ಲಂ ಜನರಿಗೆ ಪ್ರತ್ಯೇಕ ಸಚಿವಾಲಯ ಮತ್ತು ನಗರ ಉದ್ಯೋಗ ಖಾತ್ರಿ




ಯೋಜನೆಗಳನ್ನು ರಾಜ್ಯ ಸರ್ಕಾರ ಜಾರಿಗೆ ತರಬೇಕು. ರಾಜ್ಯದ ನಿವೇಶನರಹಿತರಿಗೆ ವಸತಿ ಕಲ್ಪಿಸುವ ಲ್ಯಾಂಡ್ ಬ್ಯಾಂಕ್ ಯೋಜನೆಯನ್ನು ಜಾರಿಗೊಳಿಸುವುದು ಸೇರಿದಂತೆ ವಿವಿಧ ಹಕ್ಕೊತ್ತಾಯಗಳ ಈಡೇರಿಕೆಗೆ ಫ್ರೀಡಂ ಪಾರ್ಕ್‌ನಲ್ಲಿ ಸ್ಲಂ ಜನರ ಬೃಹತ್ ಪ್ರತಿಭಟನೆಯನ್ನು ನಡೆಸಿದರು. ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಸರ್ಕಾರದ ಪರವಾಗಿ ಮನವಿ ಸ್ವೀಕರಿಸಿ ಮಾತನಾಡಿದ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಪ್ರಸಾದ್ ಅಬ್ಬಯ್ಯ, ಇಂದು ಮುಖ್ಯಮಂತ್ರಿಗಳು ಮತ್ತು ವಸತಿ ಸಚಿವರ ಸಮ್ಮುಖದಲ್ಲಿ ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಸ್ಲಂ ನಿವಾಸಿಗಳಿಗೆ ಅಗತ್ಯವಿರುವ ಸೌಲಭ್ಯಗಳನ್ನು ನೀಡಲು ಜನಸಂಖ್ಯೆಗೆ ಅನುಗುಣವಾಗಿ ಅನುದಾನ ನೀಡುವಂತೆ ಮನವಿ ಮಾಡಲಾಗಿದೆ. ಮುಖ್ಯಮಂತ್ರಿಗಳು ಸಕರಾತ್ಮಕವಾಗಿ ಸ್ಪಂದಿಸಿ ಕೊಳಚೆ ಪ್ರದೇಶಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು 500 ಕೋಟಿ ಅನುದಾನ ನೀಡಲು ಸಮ್ಮತಿಸಿದ್ದಾರೆ. ರಾಜ್ಯದಲ್ಲಿಯ ಖಾಸಗಿ ಕೊಳಚೆ ಪ್ರದೇಶಗಳ ಘೋಷಣೆಗೆ ತೊಡಕಾಗಿರುವ ಸುತ್ತೋಲೆಯನ್ನು ಈ ಅಧಿವೇಶನದಲ್ಲಿ ವಾಪಸ್ ಪಡೆಯಲು ಸಿದ್ಧತೆ ಮಾಡಲಾಗಿದೆ. ಕೊಳಚೆ ಪ್ರದೇಶಗಳ ಅಭಿವೃದ್ಧಿಗೆ ಪ್ರತ್ಯೇಕ ಸಚಿವಾಲಯ ಅಗತ್ಯವಿದ್ದು, ಮುಖ್ಯಮಂತ್ರಿಗಳ ಗಮನಕ್ಕೆ ತಂದು ಸ್ಲಂ ಜನರ ಹಕ್ಕೊತ್ತಾಯಗಳಿಗೆ ಸ್ಪಂದಿಸಲಾಗುವುದೆಂದು ಭರವಸೆ ನೀಡಿದರು.

ಸ್ಲಂ ಜನಾಂದೋಲನ ಕರ್ನಾಟಕ ರಾಜ್ಯ ಸಂಚಾಲಕ ಎ. ನರಸಿಂಹಮೂರ್ತಿ, ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ, ಸ್ಲಂ ಜನಾಂದೋಲನ ಸಮಿತಿ ರಾಜ್ಯ ಸಂಘಟನಾ ಸಂಚಾಲಕ ಜನಾರ್ಧನ ಹಳ್ಳಿಬೆಂಚಿ, ಸಾವಿತ್ರಿಬಾ ಫುಲೆ ಸಂಘಟನೆಯ ಸಂಚಾಲಕಿ ಚಂದ್ರಮ್ಮ, ರಾಜ್ಯ ಸಮಿತಿ ಮುಖಂಡರಾದ ಶೋಭಾ ಕಮತರ, ವೆಂಕಮ್ಮ, ರೇಣುಕಾ ಸರಡಗಿ, ಸುಧಾ, ಶೇಖರಬಾಬು, ಅರುಣ, ರೇಣುಕಾ ಯಲ್ಲಮ್ಮ, ತೇಜಸಕುಮಾರ, ಗದಗ ಜಿಲ್ಲಾ ಸ್ಲಂ ಸಮಿತಿ ಮುಖಂಡರಾದ ಮೆಹಬೂಬಸಾಬ ಬಳ್ಳಾರಿ, ಅಕ್ಬರಸಾಬ ಡಂಬಳ, ಮೌಲಾಸಾಬ ಗಚ್ಚಿ, ಮಂಜುನಾಥ ಶ್ರೀಗಿರಿ, ಖಾಜಾಸಾಬ ಇಸ್ಮಾಯಿಲನವರ, ಸಲೀಮ ಹರಿಹರ, ಶಂಕ್ರಪ್ಪ ಮುಂಡರಗಿ, ದುರ್ಗಪ್ಪ ಮಣ್ಣವಡರ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಸ್ಲಂ ನಿವಾಸಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿದರು.

ಭೂಮಿ, ವಸತಿ, ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ರಸ್ತೆ, ಚರಂಡಿ, ಬೀದಿದೀಪ, ಶೌಚಾಲಯ ಇತ್ಯಾದಿ ಕನಿಷ್ಠ ಸೌಲಭ್ಯಗಳನ್ನು ನೀಡದೆ ಅಭಿವೃದ್ಧಿಯಿಂದ ಸ್ಲಂ ಜನರನ್ನು ವಂಚಿಸುವ ಮೂಲಕ ಸಂವಿಧಾನದ ಖಾತ್ರಿಗಳನ್ನು ದೊರಕದಂತೆ ಮಾಡಲಾಗಿದೆ. ಹಾಗಾಗಿ ಸಂವಿಧಾನದ ಸಾಮಾಜಿಕ ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಹಿನ್ನೆಲೆಯಲ್ಲಿ ಕೆಲಸ ಮಾಡುತ್ತಿರುವ ಕರ್ನಾಟಕ ಸರ್ಕಾರ ರಾಜ್ಯದ ಸ್ಲಂ ಜನರ ಪರವಾದ ಯೊಜನೆಗಳನ್ನು ಜಾರಿಗೆ ತಂದು ಅನುದಾನ ನೀಡಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದರು.

# ಶಿಕ್ಷಣದೊಂದಿಗೆ ಸಂಸ್ಕಾರವನ್ನೂ ನೀಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸರಕಾರಿ ಹಿರಿಯ ಮಾದರಿ ಪ್ರಾಥಮಿಕ ಶಾಲೆ ನಂ.1ರಲ್ಲಿ ಶಾಲಾ ವಾರ್ಷಿಕೋತ್ಸವ, ಚಿಣ್ಣರ ಕಲಾ ವೈಭವ ಅದ್ದೂರಿಯಾಗಿ ನೆರವೇರಿತು. ಕಾರ್ಯಕ್ರಮವನ್ನು ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ ಉದ್ಘಾಟಿಸಿ ಮಾತನಾಡಿ, ಮಕ್ಕಳ ಪ್ರತಿಭೆಯನ್ನು ಪ್ರದರ್ಶಿಸಲು ವಾರ್ಷಿಕೋತ್ಸವ, ಚಿಣ್ಣರ ಅಂಗಳ, ಕಲಿಕಾ ಹಬ್ಬಗಳು ಹೆಚ್ಚು ಸಹಾಯ ಮಾಡುತ್ತವೆ. ಎಲ್ಲ ಮಕ್ಕಳಿಗೂ ಸಮಾನ ಅವಕಾಶಗಳನ್ನು ನೀಡುವ ಕಾರ್ಯವನ್ನು ಮಾಡಬೇಕು ಎಂದರು.




ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಬಿ.ಎಸ್. ಹರ್ಲಾಪೂರ ಮಾತನಾಡಿ, ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ನೀಡುವುದು ಇಂದಿನ ಅಗತ್ಯವಾಗಿದೆ.

ಇಂತಹ ಕಾರ್ಯಕ್ರಮಗಳು ಮಕ್ಕಳ ಪ್ರತಿಭೆ ಹೊರಹೊಮ್ಮಲು ಸಹಾಯ ಮಾಡುತ್ತವೆ. ಸರ್ಕಾರಿ ಶಾಲೆಗಳಲ್ಲಿ ಈ ರೀತಿ ಕಾರ್ಯಕ್ರಮ ಮಾಡುವುದರಿಂದ ಪೋಷಕರಲ್ಲಿ ಸರ್ಕಾರಿ ಶಾಲೆಗಳ ಕುರಿತು ಒಲವು ಮೂಡುತ್ತದೆ ಎಂದು ಅಭಿಪ್ರಾಯಪಟ್ಟರು.

ಪುರಸಭೆ ಸದಸ್ಯೆ ಪೂರ್ಣಿಮಾ ಪಾಟೀಲ, ಶಂಕರ ಬ್ಯಾಡಗಿ, ಸರಕಾರಿ ನೌಕರರ ಸಂಘದ ಅಧ್ಯಕ್ಷ ಗುರುರಾಜ ಹವಳದ, ಬಸವರಾಜ ಯರಗುಪ್ಪಿ, ಪತ್ರಕರ್ತ ದಿಗಂಬರ ಪೂಜಾರ ಮತ್ತಿತರರು ಮಾತನಾಡಿದರು.

ಎಸ್.ಡಿ.ಎಂ.ಸಿ ಅಧ್ಯಕ್ಷ ಬಸವರಾಜ ಗೋಡಿ ಅಧ್ಯಕ್ಷತೆ ವಹಿಸಿದ್ದರು. ಎಂ.ಎ. ನದಾಫ್, ಚಂದ್ರು ನೇಕಾರ, ಎಂ.ಡಿ. ವಾರದ, ಎಲ್.ಎನ್. ನಂದೆಣ್ಣವರ, ಗೀತಾ ಹಳ್ಯಾಳ, ಸಿ.ಆರ್.ಪಿ ಉಮೇಶ ನೇಕಾರ, ಸತೀಶ ಬೋಮಲೆ, ಬಿ.ಎಂ. ಕುಂಬಾರ, ಎಸ್.ಡಿ.ಎಂ.ಸಿ ಸದಸ್ಯರಾದ ಪ್ರಕಾಶ, ರಾಮಣ್ಣಕಮತದ, ಶಿವನಗೌಡಪಾಟೀಲ , ಶಿಕ್ಷಕಿಯರಾದ ಎಸ್.ಎಸ್. ಮಹಾಲಿಂಗಶೆಟ್ಟರ, ಇ.ಎಚ್. ಪೀಟರ, ಚೈತನ್ಯ ಮುದಗಲ್, ಶೃತಿ ಜಲ್ಲಿಗೇರಿ, ಶೋಭಾ ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾಯ ಡಿ.ಎನ್. ದೊಡ್ಡಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸವಿತಾ ಬೋಮಲೆ ಸ್ವಾಗತಿಸಿದರು. ಆರ್.ಬಿ.ಅಡರಕಟ್ಟಿ ನಿರೂಪಿಸಿದರು. ಎಸ್.ಎಸ್. ಮುಳಗುಂದ ವಂದಿಸಿದರು.

# ಆಸ್ತಿ ಮಾಲೀಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಅಧಿಸೂಚನೆಯನ್ವಯ ಕರ್ನಾಟಕ ಪೌರಸಭೆಗಳ ತೆರಿಗೆ ನಿಯಮ, 2025 ಮತ್ತು ಕರ್ನಾಟಕ ಪುರಸಭೆ ತೆರಿಗೆ ನಿಯಮ 2025 ನ್ನು ಜಾರಿಗೆ ತಂದಿದ್ದು, ಪುರಸಭೆಗಳ (ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ) ವ್ಯಾಪ್ತಿಯಲ್ಲಿ ಎ–ಖಾತಾ ಮತ್ತು ಬಿ–ಖಾತಾ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ದಿ.10–09–2024 ರ ಅಂತ್ಯದವರೆಗೆ ಅನಧಿಕೃತ ಬಡಾವಣೆಗಳಲ್ಲಿ ನಿರ್ಮಿಸಿಕೊಂಡ ನಿವೇಶನ / ಕಟ್ಟಡಗಳಿಗೆ ಬಿ– ಖಾತೆ ನೀಡಲು ಅವಕಾಶ ಕಲ್ಪಿಸಿಕೊಡಲಾಗಿದ್ದು, ಇಂತಹ ಪ್ರಕರಣಗಳ ವ್ಯಾಪ್ತಿಗೆ ಬರುವ ಆಸ್ತಿ ಮಾಲೀಕರು ತಮ್ಮ ವ್ಯಾಪ್ತಿಯ ಪುರಸಭೆ ಈ ಕೆಳಕಂಡ ದಾಖಲೆಗಳನ್ನು ಸಲ್ಲಿಸಿ. ಇ–ಖಾತೆಗಳನ್ನು ಪಡೆಯಬಹುದು.

**ಎ–ಖಾತಾ ಪಡೆಯಲು ಸಲ್ಲಿಸಬೇಕಾದ ದಾಖಲೆಗಳು**

ಆಸ್ತಿ ಸಂಬಂಧಿಸಿದಂತೆ ಸ್ವತ್ತಿನ ಮಾಲೀಕತ್ವ ಸಾಬೀತು ಮಾಡಿಸುವ ನೋಂದಾಯಿತ ಮಾರಾಟ ಪತ್ರಗಳು / ದಾನ ಪತ್ರ / ವಿಭಾಗ ಪತ್ರಗಳೂ ಅಥವಾ ಸರ್ಕಾರದ ನಿಗಮ ಮಂಡಳಿಗಳಿಂದ ನೀಡಲಾದ ಹಕ್ಕು ಪತ್ರಗಳು / ಮಂಜೂರಾತಿ ಪತ್ರಗಳು ಕಂದಾಯ ಇಲಾಖೆಯಿಂದ 94 ಸಿಸಿ ಅಡಿ ನೀಡಲಾದ ಹಕ್ಕು ಪತ್ರ., ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯಾದ ದೃಢೀಕೃತ ಪ್ರತಿ ಮತ್ತು ನಿವೇಶನಗಳ ಬಿಡುಗಡೆ ಪತ್ರ, ಪ್ರಸಕ್ತ ಸಾಲಿನವರೆಗೆ ಋಣಭಾರ ಪ್ರಮಾಣ ಪತ್ರ, ಚಾಲ್ತಿ ಸಾಲಿನ ಆಸ್ತಿ ತೆರಿಗೆ ಪಾವತಿ ರಶೀದಿ, ಮಾಲೀಕರ ಫೋಟೋ ಮತ್ತು ಸ್ವತ್ತಿನ ಫೋಟೋ, ಮಾಲೀಕರ ಗುರುತಿನ ದಾಖಲೆ ಪ್ರತಿ.

**ಬಿ–ಖಾತಾ ಪಡೆಯಲು ಸಲ್ಲಿಸಬೇಕಾದ ದಾಖಲೆಗಳು**

ಆಸ್ತಿಗೆ ಸಂಬಂಧಿಸಿದಂತೆ ಸ್ವತ್ತಿನ ಮಾಲೀಕತ್ವ ಸಾಬೀತು ಪಡಿಸುವ ದಿ. 10–03–2024 ರ ಪೂರ್ವದಲ್ಲಿ ನೋಂದಾಯಿತ ಮಾರಾಟ ಪತ್ರಗಳು/ದಾನ ಪತ್ರ/ವಿಭಾಗ ಪತ್ರಗಳು/ಹಕ್ಕು ಖುಲಾಸೆ ಪತ್ರಗಳು, ಪ್ರಸಕ್ತ ಸಾಲಿನವರೆಗೆ ಋಣಭಾರ ಪ್ರಮಾಣ ಪತ್ರ, ಚಾಲ್ತಿ ಸಾಲಿನ ಆಸ್ತಿ ತೆರಿಗೆ ಪಾವತಿ ರಶೀದಿ, ಮಾಲೀಕರ ಫೋಟೋ ಮತ್ತು ಸ್ವತ್ತಿನ ಫೋಟೋ, ಮಾಲೀಕರ ಗುರುತಿನ ದಾಖಲೆ ಪ್ರತಿ. ಈ ಮೇಲಿನ ದಾಖಲೆಗಳನ್ನು ಈ ಪ್ರಕಟಣೆ ದಿನಾಂಕದಿಂದ ಮೂರು ತಿಂಗಳೊಳಗೆ ಸಲ್ಲಿಸಿ. ಇ–ಖಾತೆಯನ್ನು ಪಡೆಯುವುದು. ಹಾಗೂ ಹೆಚ್ಚಿನ ಮಾಹಿತಿಗಾಗಿ ಕಚೇರಿಯ ಕಂದಾಯ ವಿಭಾಗದ ಸಿಬ್ಬಂದಿಗಳನ್ನು ಸಂಪರ್ಕಿಸಬಹುದಾಗಿದೆ. ಸಹಾಯವಾಣಿ ಸಂಖ್ಯೆ–08377–244227 ಮತ್ತು ಮೊಬೈಲ್ ಸಂಖ್ಯೆ–9731948363, 9916738223, 9538304968, ವಾಟ್ಸಪ್ ಸಂಖ್ಯೆ– 9731948363 ಆಗಿರುತ್ತದೆ ಎಂದು ನರಗುಂದ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಸುಗಳ ಪ್ರದರ್ಶನ, ಉಚಿತ ಪಶು ಚಿಕಿತ್ಸಾ ಶಿಬಿರ, ಜಾಗೃತಿ ಅಭಿಯಾನ ಕಾರ್ಯಕ್ರಮ

# ಮಹಾವಿದ್ಯಾಲಯದ ಮಾರ್ಗದರ್ಶನ ಪಡೆಯಿರಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಶುವೈದ್ಯಕೀಯ ಮಹಾವಿದ್ಯಾಲಯದ ತೃತೀಯ ವರ್ಷದ ಬಿ.ವಿ.ಎಸ್ಸಿ–ಎ.ಹೆಚ್., ವಿಸ್ತರಣಾ ಶಿಕ್ಷಣ ವಿದ್ಯಾರ್ಥಿಗಳ ಪ್ರಾಯೋಗಿಕ ತರಗತಿಯಡಿ ಪಶುವೈದ್ಯಕೀಯ ಮಹಾವಿದ್ಯಾಲಯ ಗದಗ, ಪಶುವೈದ್ಯ ಸೇವಾ ಇಲಾಖೆ ಶಿರಹಟ್ಟಿ, ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ಕೊಂಚಿಗೇರಿ, ಧಾರವಾಡ ಹಾಲು ಒಕ್ಕೂಟ ಇವರ ಸಹಯೋಗದಲ್ಲಿ ರಾಸುಗಳ ಪ್ರದರ್ಶನ, ಉಚಿತ ಪಶು ಚಿಕಿತ್ಸಾ ಶಿಬಿರ ಮತ್ತು ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಕೊಂಚಿಗೇರಿ ಗ್ರಾಮದಲ್ಲಿ ಆಯೋಜಿಸಲಾಗಿತ್ತು.

ಪ್ರದರ್ಶನದಲ್ಲಿ ವಿವಿಧ ಬಗೆಯ ಆಕಳು, ಎಮ್ಮೆ ಮತ್ತು ಎತ್ತುಗಳನ್ನು ಪ್ರದರ್ಶಿಸಲಾಯಿತು. ವಿವಿಧ ವಿಭಾಗಗಲ್ಲಿ ಶ್ರೇಷ್ಠ ರಾಸುಗಳಿಗೆ ಆಕರ್ಷಕ ಬಹುಮಾನ ನೀಡಲಾಯಿತು. ಬಹುಮಾನವನ್ನು ಗ್ರಾಮದ ಪಶುವೈದ್ಯರಾದ ವಿಜಯಪುರದ ಕೆ.ಎಂ.ಎಫ್ ಜಂಟಿ ನಿರ್ದೇಶಕ ಡಾ. ಗಜರಾಜ ಶಿ.ರಣ–ತೂರ ಪ್ರಾಯೋಜಿಸಿದ್ದರು. ಈ ಸಂದರ್ಭದಲ್ಲಿ



ಮಾತನಾಡಿದ ಅವರು, ಕೊಂಚಿಗೇರಿ ಗ್ರಾಮದ ರೈತರು ಪಶುವೈದ್ಯಕೀಯ ಮಹಾವಿದ್ಯಾಲಯದ ಮಾರ್ಗದರ್ಶನ ಪಡೆದು ಪಶುಪಾಲನೆಯಲ್ಲಿ ಇನ್ನೂ ಹೆಚ್ಚಿನ ಸಾಧನೆಗೈಯಬೇಕೆಂದು ಕರೆ ನೀಡಿದರು.


ಕಾರ್ಯಕ್ರಮವನ್ನು ಪಶುವೈದ್ಯಕೀಯ ಮಹಾವಿದ್ಯಾಲಯದ ಡೀನ್ ಡಾ. ಬಿ ರಾಮಚಂದ್ರ ನೇತೃತ್ವದಲ್ಲಿ ಡಾ. ಶಿವಕುಮಾರ ರಡ್ಡೇರ, ಡಾ. ವಿನಯ್ ಟಿಕಾರೆ ಮತ್ತು ಡಾ. ಶ್ರೇಯಾಂಶ್ ಹೊಸೂರೆ ನಡೆಸಿಕೊಟ್ಟರು. ತಜ್ಞರಾದ ಡಾ. ಪಂಚಶೀಲ್, ಡಾ. ಮಹೇಶ ಅಕಾಸಿ ಭಾಗವಹಿಸಿದ್ದರು. ಧಾರವಾಡ ಹಾಲು ಒಕ್ಕೂಟದ ನಿರ್ದೇಶಕ ನಿಂಗರಾಜಗೌಡ ಪಾಟೀಲ ಅತಿಥಿಗಳಾಗಿ ಆಗಮಿಸಿದ್ದರು.

ಧಾರವಾಡ ಹಾಲು ಒಕ್ಕೂಟದ ಉಪವ್ಯವಸ್ಥಾಪಕ ಡಾ. ಪ್ರಸನ್ನ ಪಟ್ಟೇದ, ವಿಸ್ತರಣಾಧಿಕಾರಿ ಮಂಜುನಾಥ ಜುಮ್ಮಣ್ಣವರ, ಪಶುವೈದ್ಯ ಇಲಾಖೆಯ ಪಶುವೈದ್ಯಾಧಿಕಾರಿ ಡಾ. ಶಿವಸಾಗರ ಪಾಲ್ಗೊಂಡಿದ್ದರು. ಗ್ರಾಮದ ಕೃತಕ ಗರ್ಭಧಾರಣಾ ಕಾರ್ಯಕರ್ತ ಈರಣ್ಣ ಪಾಟೀಲ ಕಾರ್ಯಕ್ರಮ ಆಯೋಜನೆಯಲ್ಲಿ ಮುಖ್ಯ ಪಾತ್ರ ವಹಿಸಿದ್ದರು. ಗ್ರಾಮದ ಹಿರಿಯರಾದ ಪರಯ್ಯ ವಿಭೂತಿಮಠ, ಗ್ರಾ.ಪಂ ಉಪಾಧ್ಯಕ್ಷರಾದ ರೇಖಾ ನಡುವಲಕೇರಿ, ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾದ ರತ್ನಮ್ಮ ಕೊಡಬಾಳ ಸೇರಿದಂತೆ ಕೊಂಚಿಗೇರಿ ಗ್ರಾಮದ ಹಿರಿಯರು, ರೈತರು, ರೈತ ಮಹಿಳೆಯರು ಉಪಸ್ಥಿತರಿದ್ದರು.

ಪಶುಚಿಕಿತ್ಸಾ ಶಿಬಿರದಲ್ಲಿ ರೈತರ ಸುಮಾರು 150 ಜಾನುವಾರುಗಳ ವಿವಿಧ ಕಾಯಿಲೆಗಳು ಮತ್ತು ಸಮಸ್ಯೆಗಳಿಗೆ ನುರಿತ ತಜ್ಞ ಪಶುವೈದ್ಯರಿಂದ ಚಿಕಿತ್ಸೆ ಮತ್ತು ಸಲಹೆ ನೀಡಲಾಯಿತು. ಪಶುವೈದ್ಯಕೀಯ ಮತ್ತು ಪಶು ಸಂಗೋಪನೆಯ ವಿವಿಧ ವಿಷಯಗಳ ಕುರಿತು ಜಾಗೃತಿ ಮೂಡಿಸಲು ಪ್ರದರ್ಶನ ಏರ್ಪಡಿಸಲಾಗಿತ್ತು.

# ಇಂದು ವಿಶೇಷ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಸ್ಥಳೀಯ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಮಹಾಶಿವರಾತ್ರಿಯ ಅಂಗವಾಗಿ ಫೆ. 26 ಬೆಳಿಗ್ಗೆಯಿಂದಲೇ ಹೆಸರಾಂತ ಕಲಾವಿದರಿಂದ ಹಾಗೂ ಪುಲಿಗೇರಿಯ ಕಲಾ ಮನಸ್ಸುಗಳಿಂದ ಬೃಹತ್ ಕ್ಯಾನ್ವಾಸ್ ಚಿತ್ರ ರಚನೆ ಚಿತ್ರ ಧ್ಯಾನ ಮಾಡೋಣ ಬನ್ನಿರಿ ಎಂಬ ವಿಶೇಷ ಕಾರ್ಯಕ್ರಮ ಚಿತ್ರಕಲಾವಿದ/ಶಿಕ್ಷಕ ಪ್ರವೀಣ ಗಾಯಕರ ನೇತೃತ್ವದಲ್ಲಿ ನೆರವೇರಲಿದೆ.

# ರಾಜ್ಯದ ಪ್ರವಾಸೋದ್ಯಮದ ಬೆಳವಣಿಗೆಗೆ ಒತ್ತಾಸೆ

▶▶ಮೊದಲನೇ ಪುಟದಿಂದ

ನಮ್ಮ ರಾಜ್ಯದ ಎಲ್ಲಾ ಭಾಗದ 150ಕ್ಕೂ ಹೆಚ್ಚು ಭಾಗಿದಾರರು ಭಾಗವಹಿಸಲಿದ್ದು, ಎಲ್ಲರಿಗೂ ತಮ್ಮ ತಮ್ಮ ಉತ್ಪನ್ನಗಳ ಪ್ರದರ್ಶನಕ್ಕಾಗಿ ಮಳಿಗೆ ವ್ಯವಸ್ಥೆ ಮಾಡಲಾಗಿದೆ. ಅಷ್ಟೇ ಅಲ್ಲದೇ, ಕಾವೇರಿ ಹ್ಯಾಂಡಿಕ್ರಾಫ್ಟ್, ಕೆಎಸ್‌ಐಸಿ, ಕಾಫಿ ಮಂಡಳಿ, ಕೆಎಸ್‌ಡಿಎಲ್, ಕೆಎಂಎಫ್ ಮಳಿಗೆಗಳನ್ನು ತೆರೆಯಲಿದ್ದು, ನಮ್ಮ ರಾಜ್ಯದ ವಿವಿಧ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ವ್ಯವಸ್ಥೆ ಮಾಡಲಾಗಿದೆ. ಪುರಾತತ್ವ, ವಸ್ತು ಸಂಗ್ರಹಾಲಯಗಳು, ಪರಂಪರೆ ಇಲಾಖೆ, ಸುವರ್ಣ ರಥ, ಪ್ರವಾಸೋದ್ಯಮ ಇಲಾಖೆ ಮಳಿಗೆಗಳನ್ನು ತೆರೆಯಲಾಗುವುದು. ಇದರಿಂದಾಗಿ ನಮ್ಮ ರಾಜ್ಯಕ್ಕೆ ಆಗಮಿಸುವ ಪ್ರವಾಸಿಗರ ಸಂಖ್ಯೆಯಲ್ಲಿ ಗಣನೀಯ ಏರಿಕೆ ಉಂಟಾಗಲಿದೆ. ಮುಂದಿನ ವರ್ಷಗಳಲ್ಲಿ ಅಂದಾಜು 1 ಕೋಟಿ ದೇಶಿ ಪ್ರವಾಸಿಗರು ಮತ್ತು 1 ಲಕ್ಷ ವಿದೇಶಿ ಪ್ರವಾಸಿಗರ ಸಂಖ್ಯೆಯಲ್ಲಿ ಹೆಚ್ಚಳವಾಗುವ ಸಾಧ್ಯತೆ ಇದೆ. ಈ ಮೂಲಕ ನಮ್ಮ ರಾಜ್ಯಕ್ಕೆ ವಿದೇಶಿ ವಿನಿಮಯ ಹೆಚ್ಚಾಗಲಿದೆ ಹಾಗೂ ನೇರ ತೆರಿಗೆ ಮತ್ತು ಪರೋಕ್ಷ ತೆರಿಗೆ ಮೂಲಕ ರಾಜ್ಯಕ್ಕೆ ಆದಾಯ ಬರುತ್ತದೆ. ಮುಂದಿನ 3–4 ವರ್ಷಗಳಲ್ಲಿ ಅಂದಾಜು 2,750 ಕೋಟಿ ಆದಾಯ ರಾಜ್ಯಕ್ಕೆ ಬರುವ ನಿರೀಕ್ಷೆಯಿದೆ. ಆದಾಯದ ಜೊತೆಗೆ ಆರ್ಥಿಕ ಚಟುವಟಿಕೆಗಳು ಗರಿಗೆದರಿ ಸ್ಥಳೀಯರಿಗೆ ಉದ್ಯೋಗಾವಕಾಶಗಳು ಹೆಚ್ಚಾಗಲಿವೆ. ಕುಶಲ, ಅರೆಕುಶಲ ಯುವಕ–ಯುವತಿಯರಿಗೆ ತಮ್ಮ ತಮ್ಮ ಸ್ಥಳಗಳಲ್ಲಿ ಉದ್ಯೋಗಗಳು ದೊರೆಯಲಿದ್ದು, ದೊಡ್ಡ ನಗರಗಳಿಗೆ ವಲಸೆ ಹೋಗುವುದು ತಪ್ಪುತ್ತದೆ ಎಂದು ಅವರು ತಿಳಿಸಿದರು. ಮಾಜಿ ಸಂಸದರಾದ ಎಂ.ಎಂ. ಹಿಂಡಸಗೇರಿ, ಮುಖಂಡರಾದ ಸದಾನಂದ ಡಂಗನವರ, ಮಹೇಂದ್ರ ಸಿಂಘಿ ಪತ್ರಿಕಾಗೋಷ್ಠಿಯಲ್ಲಿ ಇದ್ದರು.

## ಸಹಕಾರ ಬ್ಯಾಂಕ್, ಪತ್ತಿನ ಸಹಕಾರ ಸಂಘಗಳಿಗೆ ವಿಶೇಷ ತರಬೇತಿ ಶಿಬಿರ

# ಪಟ್ಟಣ ಸಹಕಾರ ಬ್ಯಾಂಕುಗಳು ಅಗ್ರಸ್ಥಾನದಲ್ಲಿವೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು ಹಾಗೂ ಗದಗ ಜಿಲ್ಲಾ ಸಹಕಾರ ಯೂನಿಯನ್ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯ ಎಲ್ಲಾ ಪಟ್ಟಣ ಸಹಕಾರ ಬ್ಯಾಂಕುಗಳ ಮತ್ತು ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ಮುಖ್ಯ ಕಾರ್ಯನಿರ್ವಾಹಕರು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ವಿಶೇಷ ತರಬೇತಿ ಶಿಬಿರವು ಮರ್ಚಂಟ್ಸ್ ಲಿಬರಲ್ ಕೋ–ಆಪ್ ಬ್ಯಾಂಕ್ ಸಭಾಭವನದಲ್ಲಿ ಜರುಗಿತು.

ಕಾರ್ಯಕ್ರಮವನ್ನು ಮರ್ಚಂಟ್ಸ್ ಲಿಬರಲ್ ಕೋ–ಆಪ್ ಬ್ಯಾಂಕ್‌ನ ಅಧ್ಯಕ್ಷ ಮೋಹನ ಟಿ.ಕೋಟಿ ಉದ್ಘಾಟಿಸಿ ಮಾತನಾಡುತ್ತಾ, ಕರ್ನಾಟಕದ ಸಹಕಾರವು ಚಳವಳಿಯಲ್ಲಿ ರಾಷ್ಟ್ರದಲ್ಲೇ ಮುಂಚೂಣಿಯಲ್ಲಿದ್ದು, ಅಂದಾಜು 47 ಸಾವಿರ ವಿವಿಧ ರೀತಿಯ ಸಹಕಾರ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಸಹಕಾರ ಚಳುವಳಿಯ ಬೆಳವಣಿಗೆಗೆ ತಮ್ಮದೇ ಆದ ಕೊಡುಗೆ ನೀಡುತ್ತಿರುವ ಸಂಸ್ಥೆಗಳಲ್ಲಿ ಇಂದು ಪಟ್ಟಣ ಸಹಕಾರ ಬ್ಯಾಂಕುಗಳು ಅಗ್ರಸ್ಥಾನದಲ್ಲಿವೆ. ಪಟ್ಟಣ ಸಹಕಾರ ಬ್ಯಾಂಕುಗಳ ವಲಯ ಪಟ್ಟಣ ಪ್ರದೇಶದ ಜನರಿಗೆ



ಆರ್ಥಿಕವಾಗಿ ಅಗತ್ಯವಿರುವ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಯಶಸ್ವಿಯಾಗಿದ್ದು, ಪಟ್ಟಣ ಪ್ರದೇಶದ ಜನರಿಗೆ ಸ್ವಾವಲಂಬಿ ಬದುಕಿಗೆ ಪ್ರೇರಣೆ ನೀಡಿ ಪೋಷಕ ಸಂಸ್ಥೆಗಳಾಗಿ ಕಾರ್ಯನಿರ್ವಹಿಸುತ್ತಿವೆ ಎಂದರು.

ಮರ್ಚಂಟ್ಸ್ ಅರ್ಬನ್ ಕೋ–ಆಪ್ ಬ್ಯಾಂಕಿನ ಅಧ್ಯಕ್ಷ ಕೆ.ಎಸ್. ಚಟ್ಟಿ ಮಾತನಾಡುತ್ತಾ, ವಾಣಿಜ್ಯ ಬ್ಯಾಂಕುಗಳಿಗೆ ಹೋಲಿಸಿದರೆ ಪಟ್ಟಣ ಸಹಕಾರ ಬ್ಯಾಂಕುಗಳು ಗಾತ್ರದಲ್ಲಿ ಬಹಳ ಚಿಕ್ಕವು. ವಾಣಿಜ್ಯ ಬ್ಯಾಂಕುಗಳ ಮೇಲೆ ಇರುವಷ್ಟು ನಂಬಿಕೆ ಪಟ್ಟಣ ಸಹಕಾರ ಬ್ಯಾಂಕುಗಳ ಮೇಲೆ ಇರುವುದಿಲ್ಲ. ಅದರಲ್ಲೂ ಸಣ್ಣ ಗಾತ್ರದ ಬ್ಯಾಂಕುಗಳಲ್ಲಿ ಠೇವಣಿ ಹೂಡುವಾಗ ಕೊಡುವ ಬಡ್ಡಿದರ, ನಂಬಿಕೆ ಹೆಚ್ಚು ಕೆಲಸ ಮಾಡುತ್ತದೆ.

ನಂಬಿಕೆಯ ಅಸ್ತಿತ್ವವನ್ನೇ ಅಲ್ಲಾಡಿಸುವ ಘಟನೆಗಳು ನಡೆದಾಗ ಉತ್ತಮವಾಗಿ ಕೆಲಸ ನಿರ್ವಹಿಸುತ್ತಿರುವ ಬ್ಯಾಂಕುಗಳ ಮೇಲೆ ಅದರ ಋಣಾತ್ಮಕ ಪರಿಣಾಮ ಆಗುತ್ತದೆ ಎಂದರು.

ಮರ್ಚಂಟ್ಸ್ ಲಿಬರಲ್ ಬ್ಯಾಂಕಿನ ಉಪಾಧ್ಯಕ್ಷ ಕೆ.ಎಸ್. ಪರ್ವತಗೌಡ್ರ, ನಿರ್ದೇಶಕರಾದ ಚಂದ್ರಕಾಂತ ಎಸ್.ಸಂಕಣ್ಣವರ, ಸಂತೋಷ ಅಬ್ಬಿಗೇರಿ, ಸಿ.ಟಿ. ದುಂದೂರ, ಪ್ರಧಾನ ವ್ಯವಸ್ಥಾಪಕ ರಾಜು ಎಲ್.ಕೋಟಿ ಹಾಗೂ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಹಿರಿಯ ಲೆಕ್ಕಪರಿಶೋಧಕರಾದ ಜ್ಯೋತಿ ಎನ್.ಮಾಳೆಕೊಪ್ಪ ಉಪಸ್ಥಿತರಿದ್ದರು.

ತರಬೇತಿ ಕಾರ್ಯಾಗಾರದಲ್ಲಿ ಬಿ.ಫಿ. ರವಿಂದ್ರನಾಥ, ವರುಣ ಭಟ್ಟ, ಪ್ರಶಾಂತ ಮುಧೋಳ ಉಪನ್ಯಾಸ ನೀಡಿದರು. ವಿದ್ಯಾ ಹುಬ್ಬಳ್ಳಿ ಪ್ರಾರ್ಥಿಸಿದರು. ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ರಶೀದಾಬಾನು ಸಿ.ಯಲಿಗಾರ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಎಸ್.ಕೆ. ಕುರಡಗಿ ಮಾತನಾಡಿ, ಜನತೆಗೆ ಬ್ಯಾಂಕುಗಳಿಗೆ ವಿಧಿಸುವ ಆದಾಯ ತೆರಿಗೆಯೂ ಸಹ ಬ್ಯಾಂಕಿನ ಬೆಳವಣಿಗೆಗೆ ಅಡ್ಡಿಯಾಗುತ್ತಿದ್ದು, ಈ ಕುರಿತು ಸಹಕಾರಿಗಳು ಹಾಗೂ ಸರ್ಕಾರ ಚಿಂತನ–ಮಂಥನ ನಡೆಸಬೇಕಾಗಿದೆ ಎಂದು ಹೇಳಿದರು.

# ಚಂದ್ರಮೌಳೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಅಬ್ಬಿಗೇರಿ ರಸ್ತೆಯಲ್ಲಿರುವ ಶ್ರೀ ಚಂದ್ರಮೌಳೇಶ್ವರ ದೇವಸ್ಥಾನದಲ್ಲಿ ಮಹಾಶಿವರಾತ್ರಿ ನಿಮಿತ್ತ ಶ್ರೀ ಚಂದ್ರಮೌಳೇಶ್ವರನಿಗೆ ಬೆಳಿಗ್ಗೆ 8.30ಕ್ಕೆ ಅಭಿಷೇಕ ಮತ್ತು ಸಾಯಂಕಾಲ 6ಕ್ಕೆ ಪ್ರಸಾದ ವಿತರಣೆ ಇರುತ್ತದೆ ಎಂದು ದೇವಸ್ಥಾನದ ಅರ್ಚಕರಾದ ಅಡವಯ್ಯ ಗುಂಡಗೋಪುರಮಠರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಬ್ರಹ್ಮಕುಮಾರಿ ವಿಶ್ವ ವಿದ್ಯಾಲಯದಲ್ಲಿ:** ಪಟ್ಟಣದ ಬ್ರಹ್ಮಕುಮಾರಿ ವಿಶ್ವವಿದ್ಯಾಲಯದ ವತಿಯಿಂದ ಮಹಾ ಶಿವರಾತ್ರಿಯನ್ನು ವೈಶಿಷ್ಟ್ಯಪೂರ್ಣವಾಗಿ ಆಚರಿಸಲಾಗುವುದೆಂದು ಸಂಚಾಲಕಿ ಬಿ.ಕೆ. ಸವಿತಕ್ಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಳಿಗ್ಗೆ 7ಕ್ಕೆ ಆಶ್ರಮದಲ್ಲಿ ಧ್ವಜಾರೋಹಣ ಜರುಗಲಿದೆ. ನಂತರ ದ್ವಾದಶ ಜ್ಯೋತಿರ್ಲಿಂಗಗಳ ಮೆರವಣಿಗೆಯು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಾಗಲಿದೆ. ಸಂಜೆ 5ಕ್ಕೆ ಬಸ್ ನಿಲ್ದಾಣದ ಎದುರಿಗಿರುವ ಸರಕಾರಿ ಪ್ರಾಥಮಿಕ ಶಾಲಾ ಮೈದಾನದಲ್ಲಿ ಪ್ರಥಮ ಬಾರಿಗೆ ನರೇಗಲ್ಲ ಪಟ್ಟಣಕ್ಕೆ ಆಗಮಿಸುತ್ತಿರುವ 45 ಅಡಿ ಎತ್ತರದ ಬಲೂನ್ ಲಿಂಗು ದರ್ಶನದ ವ್ಯವಸ್ಥೆಯಿದ್ದು, ಭಕ್ತರೆಲ್ಲರೂ ಈ ಮಹಾ ಶಿವರಾತ್ರಿಯ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಬಿ.ಕೆ. ಸವಿತಕ್ಕ ತಿಳಿಸಿದ್ದಾರೆ.

### ಪತ್ರಿಕಾಗೋಷ್ಠಿಯಲ್ಲಿ ಸಿಐಟಿಯು ಸಂಘಟನೆಯ ರಾಜ್ಯ ಕಾರ್ಯದರ್ಶಿ ಮಹೇಶ ಪತ್ತಾರ ಮಾಹಿತಿ

# ಸಿಐಟಿಯು ಸಂಘಟನೆಯಿಂದ ಅನಿರ್ದಿಷ್ಟಾವಧಿ ಧರಣಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಕಾರ್ಮಿಕ ವರ್ಗದ ವಿವಿಧ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಮಾ. 3ರಿಂದ 7ರವರೆಗೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸಿಐಟಿಯು ಸಂಘಟನೆಯಿಂದ ಅನಿರ್ದಿಷ್ಟಾವಧಿ ಅಹೋರಾತ್ರಿ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ಸಿಐಟಿಯು ಸಂಘಟನೆಯ ರಾಜ್ಯ ಕಾರ್ಯದರ್ಶಿ ಮಹೇಶ ಪತ್ತಾರ ಹೇಳಿದರು. ನಗರದ ಪತ್ರಿಕಾಭವದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ರಾಜ್ಯ ಬಜೆಟ್ ಅಧಿವೇಶನ ಪ್ರಾರಂಭವಾಗಲಿರುವ ಹಿನ್ನೆಲೆಯಲ್ಲಿ ಸಿಐಟಿಯು ನೇತೃತ್ವದಲ್ಲಿ ವಿವಿಧ ವಿಭಾಗದ ಕಾರ್ಮಿಕರು ತಮ್ಮ ಬೇಡಿಕೆಗಳಿಗಾಗಿ ಒತ್ತಾಯಿಸಿ ಮಾ.3ರಂದು ಗ್ರಾಮ ಪಂಚಾಯಿತಿ ನೌಕರರು, ಮಾ.4ರಂದು ಬಿಸಿಯೂಟ ನೌಕರರು, ಮಾ.5ರಂದು ಕಟ್ಟಡ ಕಾರ್ಮಿಕರು, ಮಾ.6ರಂದು ಹಮಾಲಿ ಕಾರ್ಮಿಕರು ಸೇರಿದಂತೆ ವಿವಿಧ ವಲಯದ ಅಸಂಘಟಿತ ಹಾಗೂ ಕಾರ್ಖಾನೆ ಕಾರ್ಮಿಕರು, ಮಾ.7ರಂದು ಅಂಗನವಾಡಿ ನೌಕರರು ಸಾವಿರಾರು ಸಂಖ್ಯೆಯಲ್ಲಿ ಈ ಹೋರಾಟದಲ್ಲಿ ಭಾಗವಹಿಸುತ್ತಾರೆ ಎಂದರು.




ಕೇಂದ್ರದಲ್ಲಿ ಅಧಿಕಾರ ನಡೆಸುತ್ತಿರುವ ಬಿಜೆಪಿ ನೇತೃತ್ವದ ಎನ್‌ಡಿಎ ಸರಕಾರ ಇತ್ತೀಚೆಗೆ ಮಂಡಿಸಿದ ಬಜೆಟ್‌ನಲ್ಲಿ ಮತ್ತೊಮ್ಮೆ ಶೇ.99ರಷ್ಟು ದುಡಿಯುವ ವರ್ಗಕ್ಕೆ ದ್ರೋಹ ಮಾಡಿದ್ದಾರೆ. ವಿದ್ಯುತ್, ತೈಲ, ಸಾರಿಗೆ ಮತ್ತು ಹೆದ್ದಾರಿಗಳು, ಕಲ್ಲಿದ್ದಲು ಮತ್ತು ಇತರ ಖನಿಜಗಳು ಸೇರಿದಂತೆ ಅಮೂಲ್ಯವಾದ ಮೂಲಸೌಕರ್ಯಗಳು, ಅಮೂಲ್ಯ ಖನಿಜಗಳನ್ನು ಖಾಸಗಿ ವಲಯಕ್ಕೆ ಹಸ್ತಾಂತರಿಸಲು ಬೇಕಾದ ಸ್ಪಷ್ಟ ನೀಲಿ ನಕ್ಷೆಯನ್ನು ಸಿದ್ಧಪಡಿಸಿದೆ ಎಂದರು.

ಕೇಂದ್ರ ಸರಕಾರವು ಅನುಸರಿಸುವ ಆರ್ಥಿಕ ನೀತಿಗಳನ್ನೇ ರಾಜ್ಯದ ಕಾಂಗ್ರೆಸ್ ಸರಕಾರವು ಬಹುತೇಕ ಅನುಸರಿಸುತ್ತಿದೆ. ಬಿಜೆಪಿ ನೇತೃತ್ವದ ಎನ್‌ಡಿಎ ಸರಕಾರದ ಆರ್ಥಿಕ ನೀತಿಗಳ ವಿರುದ್ಧ ಕಾಂಗ್ರೆಸ್ ಪಕ್ಷದ ನಾಯಕರು ಜೋರು ಧ್ವನಿಯಲ್ಲಿ ಮಾತನಾಡುತ್ತಾರೆ. ಆದರೆ ಕಾಂಗ್ರೆಸ್ ಸರಕಾರದ ನೀತಿಗಳನ್ನು ವಿಭಿನ್ನ ರೀತಿಯಲ್ಲಿ ರೂಪಿಸಲು ಆಗುತ್ತಿಲ್ಲ. ಈ ಎರಡೂ ಪಕ್ಷಕಗಳು ಬೇರೆ ಬೇರೆಯಾದರೂ ನೀತಿಗಳೆಲ್ಲ ಒಂದೇ ಆಗಿವೆ ಎಂದು ಅಸಮಧಾನ ವ್ಯಕ್ತಪಡಿಸಿದರು. 2023ರ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ಕನಿಷ್ಠ ವೇತನದ ವೈಜ್ಞಾನಿಕ ಪುನರ್‌ವಿಮರ್ಶೆಯ ಭರವಸೆ ನೀಡಿತ್ತು. ಆದರೆ, ಅಧಿಕಾರಕ್ಕೆ ಬಂದು ಎರಡೂವರೆ ವರ್ಷಗಳಾಗುತ್ತ ಬಂದರೂ ಆ ಬಗ್ಗೆ ಧ್ವನಿ ಎತ್ತಿಲ್ಲ. ಬೊಮ್ಮಾಯಿ ಸಿಎಂ ಆಗಿದ್ದ ಸಂದರ್ಭದಲ್ಲಿ ಜಾರಿಗೊಳಿಸಿದ್ದ ಕೆಲಸದ ಅವಧಿಯನ್ನು ಹೆಚ್ಚಿಸುವ ಆದೇಶ ಸಹ ಹಿಂಪಡೆದಿಲ್ಲ ಎಂದು ದೂರಿದರು.

29 ಕಾನೂನುಗಳನ್ನು ನಾಲ್ಕು ಸಂಹಿತೆಗಳನ್ನಾಗಿ ಮಾಡಿರುವ ಕೇಂದ್ರದ ಶಾಸನಗಳ ನಿಯಮಾವಳಿಗಳನ್ನು ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ಜಾರಿ ಮಾಡಬಾರದು. ಕಾರ್ಮಿಕರ ಪರವಾದ ಕಾನೂನುಗಳನ್ನು ಜಾರಿ ಮಾಡುವಂತೆ ಒತ್ತಾಯಿಸಲಾಗುವುದು ಎಂದು ತಿಳಿಸಿದರು. ಕಾರ್ಮಿಕ ಮುಖಂಡರಾದ ಬಸವರಾಜ ಮಂತೂರ, ಮೆಹಬೂಬ್ ಸಾಬ್ ಹವಾಲ್ದಾರ್ ಇದ್ದರು.

> ಗುತ್ತಿಗೆ ಹಾಗೂ ಹೊರ ಗುತ್ತಿಗೆ ನೌಕರರಿಗೆ ನ್ಯಾಯಬದ್ಧವಾಗಿ ಸಿಗಬೇಕಾದ ಕನಿಷ್ಠ ವೇತನ ಹಾಗೂ ಕಾರ್ಮಿಕ ಕಾನೂನುಗಳ ಜಾರಿ ವಿಷಯದಲ್ಲಿ ಅಗತ್ಯ ಕ್ರಮ ವಹಿಸಬೇಕು. ಕಾರ್ಮಿಕರನ್ನು ನವಗುಲಾಮರನ್ನಾಗಿ ಮಾಡುವ ಕೋಡ್ ಬಿಲ್ ಜಾರಿಗೆ ತರಲು ಕೇಂದ್ರ ಸರ್ಕಾರ ಚಿಂತನೆ ನಡೆಸಿದ್ದು, ಅದನ್ನು ಕೈಬಿಡುವಂತೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಮಹೇಶ ಪತ್ತಾರ ತಿಳಿಸಿದರು.

### ದೈಹಿಕ ಶಿಕ್ಷಣ ಶಿಕ್ಷಕರ ಕಾರ್ಯಾಗಾರದಲ್ಲಿ ಬಿಇಓ ಎಚ್. ನಾಣಕೀ ನಾಯ್ಕ

# ದೈಹಿಕ ಶಿಕ್ಷಣವು ಕಲಿಕೆಗೆ ಪೂರಕ




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗುಣಾತ್ಮಕ ಶಿಕ್ಷಣದೊಂದಿಗೆ ಮಗುವಿನ ಸಮಗ್ರ ಬೆಳವಣಿಗೆಗೆ ಪ್ರಾಧಾನ್ಯತೆ ನೀಡುವಂತೆ ಅಭಿಪ್ರಾಯ ಪಟ್ಟಿದೆ. ಈ ನಿಟ್ಟಿನಲ್ಲಿ ದೈಹಿಕ ಶಿಕ್ಷಣವು ಚಟುವಟಿಕೆ ಆಧಾರಿತ ಶಿಕ್ಷಣವಾಗಿರುವುದರಿಂದ ಮಗುವಿನ ಹಾಗೂ ಶಿಕ್ಷಕರ ಕಲಿಕೆಗೆ ಪೂರಕವಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್. ನಾಣಕೀ ನಾಯ್ಕ ಹೇಳಿದರು.

ಅವರು ಸಮೀಪದ ಅಡರಕಟ್ಟಿ ಗ್ರಾಮ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಯೋಗ, ರಾಷ್ಟ್ರಗೀತೆ-ನಾಡಗೀತೆಯ ಕುರಿತು ದೈಹಿಕ ಶಿಕ್ಷಣ ಶಿಕ್ಷಕರ ಕಾರ್ಯಾಗಾರದಲ್ಲಿ ಮಾತನಾಡಿದರು.

ಶಿಕ್ಷಣವು ಮನುಷ್ಯನ ಸರ್ವತೋಮುಖ ಬೆಳವಣಿಗೆ ಶಾರೀರಿಕ, ಬೌದ್ಧಿಕ, ಸಾಮಾಜಿಕ, ನೈತಿಕ ವಿಕಾಸವನ್ನುಂಟು ಮಾಡುವಲ್ಲಿ ದೈಹಿಕ ಹಾಗೂ ಆರೋಗ್ಯ ಶಿಕ್ಷಣ ಮಹತ್ವದ ಪಾತ್ರವನ್ನು ವಹಿಸುತ್ತದೆ. ಆದ್ದರಿಂದಲೇ ದೈಹಿಕ ಶಿಕ್ಷಣ ಕ್ಷೇತ್ರವನ್ನು ಶಿಕ್ಷಣದ ಅವಿಭಾಜ್ಯ ಅಂಗ ಎಂಬುದಾಗಿ ಪರಿಗಣಿಸಬೇಕಾದ ಅವಶ್ಯಕತೆ ಇದೆ ಎಂದು ಹೇಳಿದರು.

ತಾಲೂಕು ದೈಹಿಕ ಪರಿವೀಕ್ಷಕರಾದ ಎಂ.ಎಂ. ಹವಳದ, ಕರಾಸನೌ ಸಂಘದ ಅಧ್ಯಕ್ಷ ಜಿ.ಡಿ. ಹವಳದ ಮಾತನಾಡಿದರು. ಕಾರ್ಯಕ್ರಮದಲ್ಲಿ ಎಮ್.ಎ. ನದಾಫ್, ಪ್ರಾಥಮಿ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಬಿ.ಎಸ್. ಹರ್ಲಾಪೂರ, ಚಂದ್ರಕಾಂತ ನೇಕಾರ, ಶಿರಹಟ್ಟಿ ತಾಲೂಕಿನ ಪ್ರಾ.ಶಾ. ಶಿಕ್ಷಕರ ಸಂಘದ ಅಧ್ಯಕ್ಷ ಎಸ್.ಎಫ್. ಮಠದ, ಶಾಲಾ ಎಸ್‌ಡಿಎಮ್‌ಸಿ ಅಧ್ಯಕ್ಷೆ ಜಯಶ್ರೀ ಭಂಗಿ, ಬಿಆರ್‌ಪಿ ಬಿ.ಎಮ್. ಯರಗುಪ್ಪಿ ಮುಂತಾದವರಿದ್ದರು. ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಗಳಾಗಿ ಎಸ್.ಎಮ್. ಬುರಡಿ ಮತ್ತು ಚೇತನ ಚುಂಚಾ ಆಗಮಿಸಿದ್ದರು.

ಎಸ್.ಸಿ. ಗೋಲಪ್ಪನವರ, ಬಿ.ಕೆ. ದ್ಯಾವನಗೌಡ್ರ, ಮುಖ್ಯೋಪಾಧ್ಯಾಯೆ ಎಸ್. ಎಚ್. ಉಮಚಗಿ, ಮಹಾಂತೇಶ ಹವಳದ, ಎ.ಎನ್. ಮುಳಗುಂದ, ಸಿ.ವಾಯ್. ಮೇಲಿನಮನೆ, ಎಮ್.ಡಿ. ತಳ್ಳಳ್ಳಿ, ಎಸ್.ಸಿ. ಹಿರೇಮಠ, ಕಿರಣ ಕಲಿವಾಳ, ಎಮ್.ಐ. ಕಣಕೆ, ಎಸ್.ಡಿ. ಲಮಾಣಿ, ಎ.ಎಮ್. ಗುತ್ತಲ, ಆರ್. ಎಚ್. ನೆರೆಗಲ್ ಹಾಗೂ ತಾಲೂಕಿನ ದೈಹಿಕ ಶಿಕ್ಷಣ ಶಿಕ್ಷಕರು ಹಾಜರಿದ್ದರು. ಕೆ.ಎಮ್. ಕೊಟ್ರಮ್ಮ, ಎಮ್. ವಾಯ್. ನೀಲನಾಯ್ಕರ, ಎಸ್.ಎಮ್. ಕೌಜಗೇರಿ, ಎಸ್.ಕೆ. ಅಮ್ಮಿನಬಾವಿ, ಪಿ.ಬಿ. ಗುರುಮಠ ವಂದಿಸಿದರು. ಡಿ.ಡಿ. ಲಮಾಣಿ ಹಾಗೂ ಪಿ.ಸಿ. ಕಾಳಶೆಟ್ಟಿ ನಿರ್ವಹಿಸಿದರು.

# ಪರಿಶ್ರಮವಿದ್ದರೆ ಸಾಧನೆಯ ಹಾದಿ ಸುಲಭ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

**ಪಟ್ಟಣದ** ಬಿಸಿಎನ್ ವಿದ್ಯಾಸಂಸ್ಥೆಯ ಬಿಸಿಎನ್ ವಿಜನ್ ವಿಜ್ಞಾನ, ವಾಣಿಜ್ಯ ಪದವಿಪೂರ್ವ ಕಾಲೇಜಿನ 2024-25ನೇ ಸಾಲಿನ ವಿದ್ಯಾರ್ಥಿಗಳು ಜೆಇಇ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದು, ಕಾಲೇಜಿನಲ್ಲಿ ಸಾಧನೆ ಮಾಡಿದ ಸಾನಿಯಾ ಸೊರಟೂರ, ಶ್ವೇತಾ ಕೊಕ್ಕಿನವರ ಅವರನ್ನು ಸಂಸ್ಥೆಯ ಕಾರ್ಯದರ್ಶಿ ಲೋಹಿತ್ ನೆಲವಿಗಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಯಾವುದೇ ವಿದ್ಯಾರ್ಥಿ ಸಾಧನೆ ಮಾಡಬೇಕೆಂಬ ಹಸಿವನ್ನು ಹೊಂದಿರಬೇಕು. ಸಾಧನೆ ಮಾಡುವದಕ್ಕೆ ಹಲವಾರು ರೀತಿಯ ಸಹಾಯಗಳು ದೊರೆಯುತ್ತವೆ. ಅವುಗಳ ಸದುಪಯೋಗಪಡಿಸಿಕೊಂಡು ನಿಶ್ಚಿತ ಗುರಿಯನ್ನು ಮುಟ್ಟಬೇಕು. ವಿದ್ಯಾರ್ಥಿ ಜೀವನದಲ್ಲಿ ಕಠಿಣ ಪರಿಶ್ರಮ, ಏಕಾಗ್ರತೆ, ಸತತ ಅಭ್ಯಾಸ, ಪ್ರಾಮಾಣಿಕತೆ ಇವುಗಳನ್ನು ಇಟ್ಟುಕೊಂಡು ಮುಂದುವರೆದರೆ ಸಾಧನೆಯ ಹಾದಿ ಸುಲಭವಾಗುತ್ತದೆ. ಈ ನಿಟ್ಟಿನಲ್ಲಿ ಬಿಸಿಎನ್ ವಿಜನ್ ಕಾಲೇಜಿನ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳು ಈ ವರ್ಷ ಜೆಇಇ ಪರೀಕ್ಷೆಯನ್ನು ಎದುರಿಸಿ ಉತ್ತಮ ಸಾಧನೆ ಮಾಡಿದ್ದು ಸಂಸ್ಥೆಗೆ ಕೀರ್ತಿ ತರುವಂತಾಗಿದೆ ಎಂದರು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಮಂಜುನಾಥ ಬಂಡಿವಾಡ, ದಿಗಂಬರ ಪೂಜಾರ, ಉಪನ್ಯಾಸಕರುಗಳಾದ ಗಿರೀಶ ರಡ್ಡಿ, ವಿಜಯಕುಮಾರ, ಬಸವರಾಜ ಶೆಟ್ಟರ, ಪ್ರಸನ್ನ, ನಾಗರತ್ನಾ, ರಾಜಶೇಖರ ಹಾಗೂ ಸಿಬ್ಬಂದಿವರ್ಗದವರಿದ್ದರು.

# ಕಾಂಗ್ರೆಸ್ ಸರ್ಕಾರ ವಿರುದ್ಧ ರಾಜ್ಯಪಾಲರಿಗೆ ದೂರು




**■ವಿಜಯಸಾಕ್ಷಿ ಸುದ್ದಿ, ಗದಗ**

ಗ್ಯಾರಂಟಿ ಯೋಜನೆಗಳಿಗೆ ಎಸ್.ಸಿ-ಎಸ್.ಟಿ, ಹಿಂದುಳಿದ ವರ್ಗಗಳ ಮೀಸಲಿಟ್ಟ ಹಣವನ್ನು ದುರ್ಬಳಕೆ ಮಾಡಿಕೊಂಡು ಎಸ್.ಸಿ-ಎಸ್.ಟಿ,, ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಅನ್ಯಾಯ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಫೆ.27ರ ಬೆಳಿಗ್ಗೆ 10.30 ಗಂಟೆಗೆ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಿಂದ ಗದಗ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಪಾದಯಾತ್ರೆಯ ಮೂಲಕ ತೆರಳಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಗುವದು ಎಂದು ಬಿಜೆಪಿ ಪ್ರಕಟಣೆ ತಿಳಿಸಿದೆ.

ಮಾಜಿ ಸಚಿವರುಗಳಾದ ಸಿ.ಸಿ. ಪಾಟೀಲ, ಕಳಕಪ್ಪ ಬಂಡಿ, ಶಾಸಕರಾದ ಡಾ. ಚಂದ್ರು ಲಮಾಣಿ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಜನಾಂದೋಲನ ರಾಜ್ಯ ತಂಡದ ಉಸ್ತುವಾರಿಗಳಾದ ಸುನೀಲ್ ವಲ್ಯಾಪುರೆ, ಬಸವರಾಜ ದಢೇಸಗೂರ್, ಮಂಜುಳಾ ಲಿಂಬಾವಳಿ, ಜಗದೀಶ ಹಿರೇಮನಿ, ಬಸವರಾಯ ನಾಯ್ಕ ಮಾಯಕೊಂಡ, ಪಳನಿವೇಲು, ಮಹೇಂದ್ರ ಕೌತಾಳ, ಮಂಜುನಾಥ ಹೂಡಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ರಾಮಪ್ಪ ಚವ್ಹಾಣ, ಲಿಂಗರಾಜ ಪಾಟೀಲ, ಪಕ್ಕಿರೇಶ ರಟ್ಟಿಹಳ್ಳಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗದ ಪ್ರಮುಖರು ಹಾಗು ಪಕ್ಷದ ಅನೇಕ ಮುಖಂಡರುಗಳು ಭಾಗವಹಿಸಲಿದ್ದಾರೆ.

ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ಪ್ರತಿಭಟನೆಯಲ್ಲಿ ಭಾಗವಹಿಸಬೇಕೆಂದು ಗದಗ ಜಿಲ್ಲಾ ಎಸ್.ಸಿ ಮೋರ್ಚಾ ಅಧ್ಯಕ್ಷ ಮಂಜುನಾಥ ಮುಳಗುಂದ, ಎಸ್.ಟಿ. ಮೋರ್ಚಾ ಅಧ್ಯಕ್ಷ ಈಶ್ವರಪ್ಪ ರಂಗಪ್ಪನವರ, ಪ್ರಧಾನ ಕಾರ್ಯದರ್ಶಿ ವಾಯ್.ಪಿ. ಅಡ್ನೂರ, ಯಲ್ಲಪ್ಪ ಶಿರಿ, ಸುರೇಶ ಚಲವಾದಿ, ಮಲ್ಲಪ್ಪ ಮಾದರ, ಸಿದ್ದೇಶ ಹೂಗಾರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಿ.ಎಸ್. ಪಾಟೀಲ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಆರ್.ಎಸ್. ಬುರಡಿ ಅಭಿಮತ

# ಶಾಲಾ ಶಿಕ್ಷಣದೊಂದಿಗೆ ಬದುಕಿನ ಶಿಕ್ಷಣವೂ ಬೇಕು




**■ವಿಜಯಸಾಕ್ಷಿ ಸುದ್ದಿ, ಗದಗ**

ಮಾನವನ ಸರ್ವಾಂಗೀಣ ಅಭಿವೃದ್ಧಿಗೆ ಶಾಲಾ ಶಿಕ್ಷಣದ ಜೊತೆಗೆ ಮೌಲ್ಯ ಶಿಕ್ಷಣ, ಅನುಭವ ಹಾಗೂ ಬದುಕಿನ ಶಿಕ್ಷಣವೂ ಮುಖ್ಯವಾಗಿ ಬೇಕು ಎಂದು ಗದಗ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಆರ್.ಎಸ್. ಬುರಡಿ ನುಡಿದರು.

ಅವರು ವಿದ್ಯಾವರ್ಧಕ ಸಂಸ್ಥೆಯ ಸಿ.ಎಸ್. ಪಾಟೀಲ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಸಿ.ಎಸ್. ಪಾಟೀಲ ಬಾಲಕಿಯರ ಪ್ರೌಢಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ಪಾಲಕರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಗೌರವ ಕಾರ್ಯದರ್ಶಿ ವೀರನಗೌಡ ಪಾಟೀಲ ಮಾತನಾಡಿ, ಇಲ್ಲಿ ಕಲಿತು ಹೋದ ಅನೇಕ ವಿದ್ಯಾರ್ಥಿಗಳು ಸಮಾಜದಲ್ಲಿ ಉನ್ನತ ಸ್ಥಾನದಲ್ಲಿದ್ದು, ಅವರನ್ನು ಕರೆದು ಪ್ರತಿ ವರ್ಷ ಗೌರವಿಸುವ ಕೆಲಸ ನಡೆಯಲಿ ಎಂದರು.

ವಿಜ್ಞಾನ ಚಿತ್ರಕಲೆ ಪ್ರದರ್ಶನವನ್ನು ಉದ್ಘಾಟಿಸಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಜಿಮ್ಸ್‌ನ ಹಿರಿಯ ಶಸ್ತ್ರಚಿಕಿತ್ಸಕ ವೈದ್ಯರಾದ ಡಾ. ಈ. ಶ್ರೀಧರ, ತಾವು ಕಲಿತ ಪ್ರಾಥಮಿಕ ಶಾಲಾ ದಿನಗಳನ್ನು ನೆನೆದು, ಬೆಳಿಗ್ಗೆ ಬೇಗ ಏಳುವ ಅಭ್ಯಾಸ ಚಿಕ್ಕಂದಿನಿಂದಲೇ ಆಯಿತು. ಬೆಳಿಗ್ಗೆ ಸ್ವಚ್ಛಂದ ವಾತಾವರಣದಲ್ಲಿ ನಾವು ಕಲಿಯುತ್ತಿದ್ದೆವು. ಇಲ್ಲಿಯ ಎಲ್ಲ ಶಿಕ್ಷಕರು ನಮಗೆ ಪ್ರೀತಿ-ಅಭಿಮಾನದಿಂದ ಕಲಿಸುತ್ತಿದ್ದರು. ತಪ್ಪು ಮಾಡಿದಾಗ ಶಿಕ್ಷೆಯನ್ನು ನೀಡುತ್ತಿದ್ದರು. ಹಾಗಾಗಿ ನಾವು ಅದೇ ಶಿಸ್ತಿನಿಂದ ಬೆಳೆದು ಮುಂದೆ ಬಂದೆವು ಎಂದರು.

ಬಾಲಕಿಯರ ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿನಿ ನಿರ್ಮಲಾ ತರವಾಡೆ, ಪ್ರಾಥಮಿಕ ಶಾಲಾ ಮುಖ್ಯಾಧ್ಯಾಪಕ ಡಾ. ಆರ್.ಎಲ್. ಹಂಸನೂರ ಮಾತನಾಡಿದರು. ಬಾಲಕಿಯರ ಪ್ರೌಢಶಾಲೆಯ ಮುಖ್ಯಾಧ್ಯಾಪಕರಾದ ಪ್ರೊ. ಎಸ್.ಜಿ. ಕೋಲ್ಮಿಯರವರು ವರದಿ ವಾಚನ ಓದಿದರು. ಎಸ್.ಎಸ್. ಗುಜಮಾಗಡಿಯವರು ಸಂದೇಶವಾಚನ ಮಾಡಿದರು.

ಕೆ.ಆಯ್. ಪಾಟೀಲ ಎಲ್ಲರಿಗೂ ಸಂವಿಧಾನ ಪೂರ್ವಪೀಠಿಕೆ ಹೇಳಿಸಿ ಕಾರ್ಯಕ್ರಮ ನಿರೂಪಿಸಿದರು. ನಿರ್ಮಲಾ ಲಮಾಣಿ ಪ್ರಾರ್ಥನೆ ಹೇಳಿದರು. ಸ್ನೇಹಾ ಮಾನೆ, ಮಧು ಹಾದಿಮನಿ ಸ್ವಾಗತ ಗೀತೆ ಹಾಡಿದರು.

ಆಡಳಿತ ಮಂಡಳಿಯ ಸದಸ್ಯರಾದ ಗೀತಾಬಾಯಿ ಪಾಟೀಲ ಮಕ್ಕಳಿಗೆ ಪಾರಿತೋಷಕ ವಿತರಿಸಿದರು. ಎಚ್.ಪಿ. ಹಿರೇಮಠ ಹಾಗೂ ವಿ.ಎಲ್. ಲಮಾಣಿ ಕಾರ್ಯಕ್ರಮ ನಿರೂಪಿಸಿದರು. ಸಾಂಸ್ಕೃತಿಕ ಕಾರ್ಯಕ್ರಮವನ್ನು ಎಸ್.ಎಂ. ತಳವಾರ, ಎಸ್.ಎಸ್. ಗಂಜಳ ನಡೆಸಿಕೊಟ್ಟರು. ಸನ್ಮಾನ ಕಾರ್ಯಕ್ರಮವನ್ನು ಆಯ್.ಎಸ್. ಗೌಡರ ನಡೆಸಿಕೊಟ್ಟರು. ಬಿ.ಎಸ್. ಹೊನ್ನಗುಡಿ ಪರಿಚಯಿಸಿ ಸ್ವಾಗತಿಸಿದರು. ಎಸ್.ಎಂ. ತಳವಾರ ವಂದಿಸಿದರು.

ಪ್ರಾಥಮಿಕ ಶಾಲಾ ನಿವೃತ್ತ ಮುಖ್ಯಾಧ್ಯಾಪಕರಾದ ಎನ್.ಎಮ್. ಪಾಟೀಲ, ಎಂ.ಬಿ. ಹೋಳಿ, ಎಸ್.ಎ. ಜಮಾದಾರ, ನಿವೃತ್ತ ಶಿಕ್ಷಕರಾದ ಎಸ್.ಬಿ. ಹೋಳಿ, ಅಂದಾನೆಪ್ಪ ವಿಭೂತಿ, ಪ್ರಾಥಮಿಕ ಶಾಲಾ ಪ್ರಧಾನಿ ಸ್ನೇಹಾ ಸುಧೀರ ಮಾನೆ, ಉಪಪ್ರಧಾನಿ ಮಹ್ಮದ ಉಲ್ಫತ್ ನವಲಗುಂದ ಹಾಗೂ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿನಿ ಪ್ರತಿನಿಧಿ ಲಕ್ಷ್ಮೀ ಮಾದರ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

> ವಿಭೂತಿ ಮಾಸಪತ್ರಿಕೆಯ ಸಹ-ಸಂಪಾದಕಿ ಕವಿತಾ ಅಂದಾನೆಪ್ಪ ವಿಭೂತಿ ಮಾತನಾಡುತ್ತ, ಹುಟ್ಟಿದಾಗಿನಿಂದ ನಮ್ಮ ತಂದೆ ನಮಗೆ ಪ್ರೋತ್ಸಾಹದಾಯಕರಾಗಿದ್ದರೆ, ಶಾಲೆಗೆ ಬಂದಾಗಿನಿಂದ ಇಲ್ಲಿನ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಾಲಾ ಶಿಕ್ಷಕರು ನನಗೆ ಸರಿಯಾದ ಬುನಾದಿ ಹಾಕಿದರು ಎಂದು ತಿಳಿಸಿದರು.

## ಗ್ರಾಮ ಪಂಚಾಯತ ಕಾರ್ಯಾಲಯ, ಕಳಸಾಪೂರ

ತಾಲೂಕ : ಗದಗ ಜಿಲ್ಲಾ : ಗದಗ

ಸಂ.ಗ್ರಾ.ಪಂ.ಕ/ಮ.ಗಾ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ: 24/02/2025

**-: ದರಪಟ್ಟಿ ಪ್ರಕಟಣೆ :-**

ಅಧ್ಯಕ್ಷರು/ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಳಸಾಪೂರ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಆದಿತ್ಯನಗರದ ಪ್ರವೀಣ ಅಸೂಟಿಯವರ ಮನೆಯಿಂದ ದಂಡಿನವರ ಮನೆಯವರೆಗೆ ಎರಡು ಬದಿಯ ಸಿ ಸಿ ಚರಂಡಿ ನಿರ್ಮಾಣ | 231904 | 500 | ಖಾಲಿ ಟೆಂಡರ್ ಫಾರಂಗಳನ್ನು ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸತಕ್ಕದ್ದು. |
| 2 | ಆದಿತ್ಯನಗರದ ರಾಜಕುಮಾರ ಕನ್ನೂರ ಮನೆಯಿಂದ ಗದಗ ಮುಖ್ಯ ರಸ್ತೆಯ ಎರಡು ಬದಿಯ ಸಿ ಸಿ ಚರಂಡಿ ನಿರ್ಮಾಣ | 275803 | 500 | |
| 3 | ಕಳಸಾಪೂರ ಗ್ರಾಮದ ನಾಗವ್ವ ಚಲವಾದಿ ಇವರ ಮನೆಯಿಂದ ಸಿಕಂದರ ಮನೆಯವರೆಗೆ ಸಿ ಸಿ ಗಟಾರ ನಿರ್ಮಾಣ | 114569 | 500 | |
| 4 | ಕಳಸಾಪೂರ ಗ್ರಾಮದ ದ್ಯಾಮಣ್ಣ ಹೊಸೂರ ಇವರ ಮನೆಯಿಂದ ಕಣವಿ ತೋಟದವರೆಗೆ ಸಿ ಸಿ ರಸ್ತೆ ನಿರ್ಮಾಣ | 144362 | 500 | |
| 5 | ಕಳಸಾಪೂರ ಗ್ರಾಮದ ರಮೇಶ ನಾಯಕ ಇವರ ತೋಟದಿಂದ ಆನಂದರಾವ ಹುಯಿಲಗೋಳ ಇವರ ತೋಟದವರೆಗೆ ಮೊರಂ ರಸ್ತೆ ನಿರ್ಮಾಣ | 192524 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : 25/02/2025 ರಿಂದ 04/03/2025 ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ : 05/03/2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ : 05/03/2025 ಮಧ್ಯಾಹ್ನ 4.00 ಗಂಟೆ.

**ನಿಬಂಧನೆಗಳು**

1) ಷರತ್ತು/ನಿಬಂಧನೆಗಳಿಗೆ,ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ (ರಜಾ ದಿನಗಳನ್ನು ಹೊರತುಪಡಿಸಿ) ಗ್ರಾಮ ಪಂಚಾಯತ ಕಛೇರಿಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/-
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
ಗ್ರಾಮ ಪಂಚಾಯತಿ ಕಳಸಾಪೂರ

ಸಹಿ ಆಗಿದೆ/-
**ಅಧ್ಯಕ್ಷರು**
ಗ್ರಾಮ ಪಂಚಾಯತಿ ಕಳಸಾಪೂರ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka